149 ನೇ ಅಧಿವೇಶನ

# ಕರ್ನಾಟಕ ರಾಜ್ಯಪಾಲರ ರಾಜ್ಯ ವಿಧಾನ ಮಂಡಲದ ಭಾಷಣ

೧೦-೦೨-೨೦೨೩

ಶುಕ್ರವಾರ

**ಕರ್ನಾಟಕ ವಿಧಾನ ಪರಿಷತ್ತಿನ ಸನ್ಮಾನ್ಯ ಸಭಾಪತಿಗಳೇ,**

**ಕರ್ನಾಟಕ ವಿಧಾನಸಭೆಯ ಸನ್ಮಾನ್ಯ ಸಭಾಧ್ಯಕ್ಷರೇ,**

**ಸನ್ಮಾನ್ಯ ಕರ್ನಾಟಕದ ಮುಖ್ಯಮಂತ್ರಿಯವರೇ,**

**ಸನ್ಮಾನ್ಯ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರೇ,**

**ಸನ್ಮಾನ್ಯ ವಿಧಾನಸಭೆಯ ವಿರೋಧ ಪಕ್ಷದ ನಾಯಕರೇ,**

**ಸನ್ಮಾನ್ಯ ಸಚಿವರೇ ಹಾಗೂ ಕರ್ನಾಟಕ ವಿಧಾನ ಮಂಡಲದ ಸನ್ಮಾನ್ಯ ಸದಸ್ಯರೇ,**

1) ಕರ್ನಾಟಕ ವಿಧಾನಮಂಡಲದ ಈ ಜಂಟಿ ಅಧಿವೇಶನಕ್ಕೆ ತಮ್ಮೆಲ್ಲರನ್ನು ಹೃತ್ಪೂರ್ವಕವಾಗಿ ಸ್ವಾಗತಿಸುತ್ತೇನೆ. ಇಂದು, ತಮ್ಮೆಲ್ಲರನ್ನು ಉದ್ದೇಶಿಸಿ ಮಾತನಾಡುವುದು ನನ್ನ ಸೌಭಾಗ್ಯವೆಂದೇ ಭಾವಿಸುತ್ತೇನೆ. ನನ್ನ ಸರ್ಕಾರವು ರೈತರು, ಕಾರ್ಮಿಕರು, ಬಡವರು, ದುರ್ಬಲ ವರ್ಗದವರು ಮತ್ತು ಅವಕಾಶ ವಂಚಿತರ ಕಲ್ಯಾಣ ಮತ್ತು ಅಭಿವೃದ್ಧಿಗೆ ಬದ್ಧವಾಗಿದೆ ಜೊತೆಗೆ ಅಭಿವೃದ್ಧಿ ಪಥದಲ್ಲಿ ಮುಂಚೂಣಿಯ ರಾಜ್ಯವಾಗಿ ದಾಪುಗಾಲಿಡುತ್ತಿದೆ. ಎಲ್ಲರನ್ನು ಒಳಗೊಂಡ ಅಭಿವೃದ್ಧಿಯ ಮಾದರಿಯನ್ನು ನನ್ನ ಸರ್ಕಾರ ಅನುಸರಿಸುತ್ತಿದ್ದು, ಮಾನ್ಯ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಮುಂದಿನ 25 ವರ್ಷಗಳ ಅಮೃತ ಕಾಲದಲ್ಲಿ ಹಾಕಿಕೊಟ್ಟ ಪ್ರಗತಿ ಪಥವನ್ನು ಯಶಸ್ವಿಯಾಗಿ ಕ್ರಮಿಸುವ ವಿಶ್ವಾಸ ನನಗಿದೆ.

2) ರೈತನು ಈ ದೇಶದ ಬೆನ್ನೆಲುಬು. ರೈತ ಮತ್ತು ಅವನ ಕುಟುಂಬವನ್ನು ಸದೃಢಗೊಳಿಸಲು ನನ್ನ ಸರ್ಕಾರವು ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಮುಖ್ಯಮಂತ್ರಿ ರೈತ ವಿದ್ಯಾನಿಧಿಯನ್ನು ನೇಕಾರರು, ಕೃಷಿ ಕಾರ್ಮಿಕರು, ಮುಂತಾದ

Form No:1 SideA

ವಿವಿಧ ವರ್ಗಗಳಿಗೂ ವಿಸ್ತರಿಸಲಾಗಿದೆ. ಅದರಂತೆ 10.79 ಲಕ್ಷ ವಿದ್ಯಾರ್ಥಿಗಳಿಗೆ 484 ಕೋಟಿ ರೂಪಾಯಿಗಳ ವಿದ್ಯಾರ್ಥಿ ವೇತನವನ್ನು ನೇರ ನಗದು ವರ್ಗಾವಣೆ ಮೂಲಕ ವರ್ಗಾಯಿಸಲಾಗಿದೆ.

3) ರೈತಶಕ್ತಿ ಯೋಜನೆಯಡಿ ಕೃಷಿ ಯಾಂತ್ರೀಕರಣ ಪ್ರೋತ್ಸಾಹಿಸಲು ಪ್ರತಿ ಎಕರೆಗೆ 250 ರೂಪಾಯಿಗಳಂತೆ ಗರಿಷ್ಠ ಐದು ಎಕರೆಗೆ ಡೀಸೆಲ್ ಸಹಾಯಧನ ನೀಡುತ್ತಿದ್ದು, ಇದಕ್ಕಾಗಿ, 400 ಕೋಟಿ ರೂಪಾಯಿಗಳನ್ನು ಒದಗಿಸಿದ್ದು, 386.98 ಕೋಟಿ ರೂಪಾಯಿ ಬಿಡುಗಡೆ ಮಾಡಿದೆ. ಇದರಿಂದ 53.22 ಲಕ್ಷ ರೈತರುಗಳಿಗೆ ನೇರ ನಗದು ವರ್ಗಾವಣೆ ಮೂಲಕ ಸಹಾಯ ಮಾಡಲಾಗಿದೆ. ಕೀಟ, ರೋಗ, ಕಳೆಬಾಧೆ ಮತ್ತು ಮಣ್ಣಿನ ಪೋಷಕಾಂಶದ ಸಮರ್ಪಕ ನಿರ್ವಹಣೆಗಾಗಿ ಕೃಷಿ ಸಂಜೀವಿನಿ ಯೋಜನೆಯಡಿ 160 ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯಗಳನ್ನು ಲೋಕಾರ್ಪಣೆ ಮಾಡಿದ್ದು, 2022-23ನೇ ಸಾಲಿಗೆ 64 ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯವನ್ನು ಅನುಷ್ಠಾನ ಮಾಡಲಾಗಿದೆ.

4) ನನ್ನ ಸರ್ಕಾರವು ಅಮೃತ ಮಹೋತ್ಸವದ ಅಂಗವಾಗಿ 750 ಅಮೃತ ರೈತ / ಮೀನುಗಾರರ / ನೇಕಾರರ ಉತ್ಪಾದಕರ ಸಂಸ್ಥೆಗಳನ್ನು ರಚಿಸಿರುವುದಾಗಿ ಘೋಷಿಸಿದ್ದು, ಇಲ್ಲಿಯವರೆಗೆ 364 ಸಂಸ್ಥೆಗಳನ್ನು ನೊಂದಾಯಿಸಲಾಗಿದೆ. ಇದಕ್ಕಾಗಿ, 24.57 ಕೋಟಿ ರೂಪಾಯಿಗಳ ವೆಚ್ಚ ಮಾಡಲಾಗಿದೆ. ಪ್ರಸಕ್ತ ಸಾಲಿನಿಂದ ರಾಯಚೂರು ಕೃಷಿ ವಿಶ್ವವಿದ್ಯಾಲಯದ ಅಧೀನದಲ್ಲಿ ಬಳ್ಳಾರಿ ಜಿಲ್ಲೆಯ ಹಗರಿಯಲ್ಲಿ ನೂತನವಾಗಿ ಕೃಷಿ ಕಾಲೇಜನ್ನು ಪ್ರಾರಂಭಿಸಲಾಗಿದೆ.

5) ಪ್ರಸಕ್ತ ಸಾಲಿನಲ್ಲಿ 50,335 ರೈತರ ತಾಕುಗಳಲ್ಲಿ ಸುಮಾರು 27,910 ಹೆಕ್ಟೇರ್ ಪ್ರದೇಶದಲ್ಲಿ ಇಲಾಖೆಯ ವತಿಯಿಂದ ತೋಟಗಾರಿಕೆ ಬೆಳೆಗಳನ್ನು ವಿಸ್ತರಿಸಲಾಗಿದೆ. 60 ಲಕ್ಷ ಸಂಖ್ಯೆ ತೋಟಗಾರಿಕೆ ಬೆಳೆಗಳ ಸಸಿ / ಕಸಿಗಳನ್ನು ರೈತಾಪಿ ವರ್ಗಕ್ಕೆ ವಿತರಿಸಲಾಗಿದೆ ಮತ್ತು ಮಳೆ ನೀರನ್ನು ಸಂರಕ್ಷಿಸಿ ಅಂತರ್ಜಲ ಮಟ್ಟವನ್ನು ವೃದ್ಧಿಸಲು 484 ಸಂಖ್ಯೆಯ ಕೃಷಿ ಹೊಂಡ ಘಟಕಗಳನ್ನು ನಿರ್ಮಿಸಲಾಗಿದೆ.

6) ಕರ್ನಾಟಕ ರಾಜ್ಯವು ರೇಷ್ಮೆ ಉತ್ಪಾದನೆಯಲ್ಲಿ ಅಗ್ರಸ್ಥಾನ ಹೊಂದಿದೆ. 1.15 ಲಕ್ಷ ಹೆಕ್ಟೇರ್ ವಿಸ್ತೀರ್ಣದಲ್ಲಿ ಹಿಪ್ಪು ನೇರಳೆ ಬೇಸಾಯವಿದ್ದು, 1.38 ಲಕ್ಷ ರೈತ ಕುಟುಂಬಗಳು ರೇಷ್ಮೆ ಕೃಷಿಯಲ್ಲಿ ತೊಡಗಿದ್ದು, ವಾರ್ಷಿಕವಾಗಿ 11,191 ಮೆಟ್ರಿಕ್‌ನಷ್ಟು ಕಚ್ಚಾ ರೇಷ್ಮೆಯನ್ನು ಉತ್ಪಾದಿಸಲಾಗಿದ್ದು, ಅಂದಾಜು 14.91 ಲಕ್ಷ ಜನರಿಗೆ ಉದ್ಯೋಗವನ್ನು ಕಲ್ಪಿಸಿದೆ. 104.19 ಕೋಟಿ ರೂಪಾಯಿಗಳ ಸಹಾಯಧನ ಸೌಲಭ್ಯವನ್ನು 47,682 ರೇಷ್ಮೆ ಭಾಗೀದಾರರಿಗೆ ನನ್ನ ಸರ್ಕಾರವು ಒದಗಿಸಿದೆ. ಪ್ರಮುಖ ರೇಷ್ಮೆ ಗೂಡಿನ ಮಾರುಕಟ್ಟೆಯಲ್ಲಿ ಪಾರದರ್ಶಕತೆ ತರಲು ಹಾಗೂ ಸ್ಪರ್ಧಾತ್ಮಕ ದರ ನೀಡಲು ಇ-ಹರಾಜು, ಇ-ವೇಮೆಂಟ್ ಮತ್ತು ಇ-ಪೇಮೆಂಟ್ ವ್ಯವಸ್ಥೆ ಜಾರಿ ಮಾಡಿದ ದೇಶದ ಮೊದಲ ಹಾಗೂ ಏಕೈಕ ರಾಜ್ಯ ಕರ್ನಾಟಕವಾಗಿದೆ.

7) ಗೋ ಸಂಪತ್ತಿನ ರಕ್ಷಣೆಗಾಗಿ ರಾಜ್ಯದಲ್ಲಿ ಗೋಹತ್ಯಾ ನಿಷೇಧ ಕಾಯ್ದೆ ಜಾರಿಗೆ ತರಲಾಗಿದೆ. ಅಶಕ್ತ, ಅನಾರೋಗ್ಯ ಪೀಡಿತ, ನಿರ್ಗತಿಕ, ರೈತರು ಸಾಕಲಾಗದ ಜಾನುವಾರುಗಳನ್ನು ಸಂರಕ್ಷಣೆ ಮಾಡಲು ರಾಜ್ಯ ಸರ್ಕಾರದಿಂದ 100 ಸರ್ಕಾರಿ ಗೋ ಶಾಲೆಗಳನ್ನು ನಿರ್ಮಿಸಲಾಗುತ್ತಿದೆ. ಸರ್ಕಾರಿ ಹಾಗೂ ಖಾಸಗಿ ಗೋ ಶಾಲೆಗಳಲ್ಲಿರುವ ಜಾನುವಾರುಗಳನ್ನು ಸಂರಕ್ಷಿಸಲು



Form No:1 SideB

ಸಾರ್ವಜನಿಕ ಸಹಭಾಗಿತ್ವವನ್ನು ಪ್ರೋತ್ಸಾಹಿಸುವ ಪುಣ್ಯಕೋಟಿ ದತ್ತು ಯೋಜನೆಯನ್ನು ದೇಶದಲ್ಲಿಯೇ ಪ್ರಥಮವಾಗಿ ಪ್ರಾರಂಭಿಸಲಾಗಿದೆ. ಈ ಯೋಜನೆಗೆ ರಾಜ್ಯ ಸರ್ಕಾರಿ ನೌಕರರು ತಮ್ಮ ವೇತನದಿಂದ 26.97 ಕೋಟಿ ರೂಪಾಯಿಗಳನ್ನು ಸ್ವ-ಪ್ರೇರಣೆಯಿಂದ ವಂತಿಗೆಯಾಗಿ ನೀಡಿರುವುದನ್ನು ನನ್ನ ಸರ್ಕಾರವು ಪ್ರಶಂಸಿಸುತ್ತದೆ.

8) ನನ್ನ ಸರ್ಕಾರದ ವತಿಯಿಂದ ರಾಜ್ಯದ ಜಾನುವಾರುಗಳಲ್ಲಿ ಕಾಣಿಸಿಕೊಂಡಿರುವ ಚರ್ಮಗಂಟು ರೋಗೋದ್ರೇಕ ನಿಯಂತ್ರಣಕ್ಕಾಗಿ ಒಂದು ಕೋಟಿಗೂ ಹೆಚ್ಚು ಜಾನುವಾರುಗಳಿಗೆ ಲಸಿಕೆ ಹಾಕಿಸಲಾಗಿದೆ. ಮರಣ ಹೊಂದಿದ ಕರು, ದನ ಮತ್ತು ಎತ್ತುಗಳಿಗೆ ಪರಿಹಾರಧನ ನೀಡಲು ಸರ್ಕಾರದಿಂದ 37 ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿದೆ.

9) ಪ್ರಸಕ್ತ ವರ್ಷದಲ್ಲಿ ಭಾರತ ಸರ್ಕಾರವು ಕರ್ನಾಟಕ ರಾಜ್ಯವನ್ನು ಅತ್ಯುತ್ತಮ ಕರಾವಳಿ ರಾಜ್ಯ ಎಂದು ಗುರುತಿಸಿರುವುದು ಹೆಮ್ಮೆಯ ವಿಷಯವಾಗಿದೆ. ಮೀನುಗಾರರ ಆದಾಯವನ್ನು ಹೆಚ್ಚಿಸಲು ರೂ.2758.70 ಲಕ್ಷಗಳ ಸಹಾಯಧನವನ್ನು ನೀಡುವುದರ ಮೂಲಕ ರಾಜ್ಯದಲ್ಲಿ ಮತ್ಸ್ಯಸಂಪದ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗಿದೆ.

10) 2022-23ನೇ ಸಾಲಿನಲ್ಲಿ 15,066 ಕೋಟಿ ರೂಪಾಯಿಗಳ ಅಲ್ಪಾವಧಿ ಬೆಳೆ ಸಾಲವನ್ನು ಶೂನ್ಯ ಬಡ್ಡಿದರದಲ್ಲಿ ಡಿಸೆಂಬರ್ ಅಂತ್ಯಕ್ಕೆ ಒಟ್ಟು 20.19 ಲಕ್ಷ ರೈತರಿಗೆ ವಿತರಿಸಲಾಗಿದೆ. ಡಿಸೆಂಬರ್ ಅಂತ್ಯದವರೆಗೆ 29638 ಸ್ವಸಹಾಯ ಗುಂಪುಗಳಿಗೆ ಶೂನ್ಯ ಬಡ್ಡಿದರದಲ್ಲಿ 1215 ಕೋಟಿ ರೂಪಾಯಿಗಳ ಸಾಲವನ್ನು ವಿತರಿಸಲಾಗಿದೆ.

11) ಯಶಸ್ವಿನಿ ಯೋಜನೆಯಡಿ ದಿನಾಂಕ: 17-01-2023ರ ಅಂತ್ಯಕ್ಕೆ 32.60 ಲಕ್ಷ ಸದಸ್ಯರನ್ನು ನೊಂದಾಯಿಸಲಾಗಿದೆ. ಜನವರಿ ತಿಂಗಳಿನಿಂದ ಚಿಕಿತ್ಸಾ ಸೌಲಭ್ಯ ಪ್ರಾರಂಭಿಸಲಾಗಿದೆ.

12) ಕೇಂದ್ರ ಪುರಸ್ಕೃತ ಯೋಜನೆಯಡಿಯಲ್ಲಿ ಮುಂದಿನ ಮೂರು ವರ್ಷಗಳಲ್ಲಿ ರಾಜ್ಯದ 6040 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳನ್ನು ಪ್ರತೀ ಸಂಘಕ್ಕೆ 3.99 ಲಕ್ಷ ರೂಪಾಯಿಗಳಂತೆ ಒಟ್ಟು 193 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಗಣಕೀಕರಣಗೊಳಿಸಲಾಗುತ್ತಿದೆ. ಬ್ಯಾಡಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಲ್ಲಿ ಒಣಮೆಣಸಿನ ಕಾಯಿ ಉತ್ಪನ್ನಕ್ಕೆ ಆಧುನಿಕ ಗುಣ ವಿಶ್ಲೇಷಣಾ ಘಟಕವನ್ನು ಅಂದಾಜು 4 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಸ್ಥಾಪಿಸಲಾಗುತ್ತಿದೆ.

13) ನನ್ನ ಸರ್ಕಾರವು ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗಖಾತ್ರಿ ಯೋಜನೆಯಡಿ 6038.98 ಕೋಟಿ ರೂಪಾಯಿಗಳ ಬಂಡವಾಳದಲ್ಲಿ ಪ್ರಸ್ತುತ ವರ್ಷದಲ್ಲಿ 27.85 ಲಕ್ಷ ಕುಟುಂಬಗಳ, 50 ಲಕ್ಷ ಜನರಿಗೆ ಕೆಲಸ ಒದಗಿಸಿದೆ. ಗ್ರಾಮೀಣ ಪ್ರದೇಶದ ಎಲ್ಲಾ ಮನೆಗಳಿಗೆ ನೀರಿನ ಸಂಪರ್ಕ ಒದಗಿಸುವ ಜಲ್ ಜೀವನ್ ಮಿಷನ್ ಯೋಜನೆಯಡಿ ಆರಂಭದಿಂದ ಇಲ್ಲಿಯವರೆಗೆ 37.54 ಲಕ್ಷ ಮನೆಗಳಿಗೆ ನಳ ನೀರಿನ ಸಂಪರ್ಕ ಕಲ್ಪಿಸಿದ್ದು, ಇದರಿಂದ, ರಾಜ್ಯದ ಶೇಕಡ 61.34 ರಷ್ಟು ಮನೆಗಳಿಗೆ ನಳ ನೀರಿನ ಸಂಪರ್ಕ ಕಲ್ಪಿಸಿದಂತಾಗಿದೆ. ಈ ಯೋಜನೆಯಡಿ 30,308 ಕೋಟಿ ರೂಪಾಯಿಗಳ ವೆಚ್ಚದಲ್ಲಿ 101 ಬಹು ಗ್ರಾಮ ಕುಡಿಯುವ ನೀರು ಯೋಜನೆಯನ್ನು ಕೈಗೊಳ್ಳಲು ಅನುಮತಿ ನೀಡಲಾಗಿದೆ.

14) ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ ಡಿಸೆಂಬರ್ ಅಂತ್ಯದವರೆಗೆ 1119.08 ಕಿ.ಮೀ ಉದ್ದದ ರಸ್ತೆ ಕಾಮಗಾರಿಗಳನ್ನು 590.92 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗಿದೆ. ಸ್ವಚ್ಛ ಭಾರತ ಯೋಜನೆಯಡಿ 5216 ಗ್ರಾಮ ಪಂಚಾಯಿತಿಗಳಲ್ಲಿ ಘನತ್ಯಾಜ್ಯ ನಿರ್ವಹಣಾ ಘಟಕಗಳು ಕಾರ್ಯ ನಿರ್ವಹಿಸುತ್ತಿದೆ. ಗ್ರಾಮ ನೈರ್ಮಲ್ಯ ನೀತಿಯನ್ನು ಜಾರಿಗೊಳಿಸಿದ ಮೊದಲ ರಾಜ್ಯ ಎಂಬುದು ಹೆಮ್ಮೆಯ ವಿಷಯವಾಗಿದೆ.

15) 3 ರಿಂದ 6ರ ವಯೋಮಾನದ ಪೂರ್ವ ಪ್ರಾಥಮಿಕ ಮಕ್ಕಳ ಕಲಿಕೆ ಮತ್ತು ಯೋಗ ಕ್ಷೇಮಕ್ಕಾಗಿ ರಾಷ್ಟ್ರೀಯ ಶಿಕ್ಷಣ ನೀತಿ, 2020ರಲ್ಲಿ ಹೆಚ್ಚಿನ ಆದ್ಯತೆಯನ್ನು ನೀಡಲಾಗಿದೆ. ಕೋವಿಡ್-19 ರಿಂದಾಗಿ ಉಂಟಾದ ಕಲಿಕಾ ಅಂತರವನ್ನು ಸರಿಪಡಿಸಲು ಎನ್.ಇ.ಪಿ. 2020ರ ದೂರದೃಷ್ಟಿಯಂತೆ ಚಟುವಟಿಕೆ ಆಧಾರಿತ ಕಲಿಕೆಯನ್ನು ಉತ್ತೇಜಿಸಲು ಕಲಿಕಾ ಚೇತರಿಕೆ ಕಾರ್ಯಕ್ರಮವನ್ನು ರಾಜ್ಯದ ಎಲ್ಲಾ ಶಾಲೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಸರ್ಕಾರಿ ಶಾಲಾ ಕಾಲೇಜುಗಳಲ್ಲಿ 9556 ಹೆಚ್ಚುವರಿ ಶಾಲಾ ಕೊಠಡಿಗಳು, ಶೌಚಾಲಯಗಳನ್ನು ನಿರ್ಮಿಸಲು 1923.5 ಕೋಟಿ ರೂಪಾಯಿಗಳನ್ನು ಒದಗಿಸಲಾಗಿದೆ. ರಾಜ್ಯದ ಸರ್ಕಾರಿ ಮತ್ತು ಸರ್ಕಾರದ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ 1 ರಿಂದ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಕಲ್ಯಾಣ ಕರ್ನಾಟಕ ಪ್ರದೇಶವನ್ನು ಒಳಗೊಂಡಂತೆ 46 ಲಕ್ಷ ವಿದ್ಯಾರ್ಥಿಗಳಿಗೆ 132.42 ರೂಪಾಯಿ ವೆಚ್ಚದಲ್ಲಿ ಮೊಟ್ಟೆ ಅಥವಾ ಬಾಳೆಹಣ್ಣು / ಚಿಕ್ಕಿ ಹಾಗೂ 46 ದಿನಗಳು ಮಧ್ಯಾಹ್ನದ ಬಿಸಿ ಊಟದೊಂದಿಗೆ ಹಾಲನ್ನು ಸಹ ನೀಡಲಾಗುತ್ತಿದೆ. ವಿದ್ಯಾವಿಕಾಸ ಯೋಜನೆಯಡಿಯಲ್ಲಿ 61 ಲಕ್ಷ ವಿದ್ಯಾರ್ಥಿಗಳಿಗೆ ಶಾಲಾ ಪಠ್ಯ

ಪುಸ್ತಕ ಮತ್ತು 46 ಲಕ್ಷ ವಿದ್ಯಾರ್ಥಿಗಳಿಗೆ ಸಮವಸ್ತ್ರ, ಶೂ ಮತ್ತು ಸಾಕ್ಸ್‌ಗಳನ್ನು ಒದಗಿಸಲಾಗಿದೆ.

16) ನನ್ನ ಸರ್ಕಾರವು ಉನ್ನತ ಶಿಕ್ಷಣದಲ್ಲಿ ಅಮೂಲಾಗ್ರ ಬದಲಾವಣೆ ತರುವ ನಿಟ್ಟಿನಲ್ಲಿ ಹಲವು ಕ್ರಮಗಳನ್ನು ಕೈಗೊಳ್ಳುತ್ತಿದ್ದು, ಅದರನ್ವಯ, ರಾಷ್ಟ್ರೀಯ ಶಿಕ್ಷಣ ನೀತಿಯನ್ನು ದೇಶದಲ್ಲೇ ಮೊದಲ ಬಾರಿಗೆ ಕರ್ನಾಟಕದಲ್ಲಿ ಜಾರಿಗೆ ತಂದಿದೆ. ಬೀದರ್, ಹಾವೇರಿ, ಚಾಮರಾಜನಗರ, ಬಾಗಲಕೋಟೆ, ಕೊಡಗು, ಕೊಪ್ಪಳ ಮತ್ತು ಹಾಸನದಲ್ಲಿ 7 ಹೊಸ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಿದ್ದು, 7 ಇಂಜಿನಿಯರಿಂಗ್ ಕಾಲೇಜುಗಳನ್ನು ಐ.ಐ.ಟಿ. ಮಾದರಿಯಲ್ಲಿ ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಶೈಕ್ಷಣಿಕ ಮತ್ತು ಆಡಳಿತಾತ್ಮಕ ಗುಣಮಟ್ಟ ಮತ್ತು ಪಾರದರ್ಶಕತೆ ತರಲು ನನ್ನ ಸರ್ಕಾರವು ಸಮಗ್ರ ವಿಶ್ವವಿದ್ಯಾಲಯ ಮತ್ತು ಕಾಲೇಜು ನಿರ್ವಹಣಾ ವ್ಯವಸ್ಥೆ (UUCMS) ಅನುಷ್ಠಾನಗೊಳಿಸಿದೆ.

17) ನನ್ನ ಸರ್ಕಾರವು ಸಮಾಜದಲ್ಲಿ ಅನ್ಯಾಯಕ್ಕೆ ಒಳಗಾಗಿರುವ ಸಮುದಾಯವನ್ನು ಮೇಲೆತ್ತಲು ಹಲವಾರು ಕ್ರಮಗಳನ್ನು ಕೈಗೊಳ್ಳುತ್ತಿದೆ. ಇದರನ್ವಯ, ಶಿಕ್ಷಣ ಮತ್ತು ನೇಮಕಾತಿಯಲ್ಲಿ ಪರಿಶಿಷ್ಟ ಜಾತಿಯವರಿಗೆ ಶೇಕಡ 15 ರಿಂದ 17ಕ್ಕೆ ಪರಿಶಿಷ್ಟ ಪಂಗಡದವರಿಗೆ ಶೇಕಡ 3 ರಿಂದ 7ಕ್ಕೆ ಮೀಸಲಾತಿಯನ್ನು ಹೆಚ್ಚಳ ಮಾಡಿ ಐತಿಹಾಸಿಕ ಕ್ರಮಕೈಗೊಳ್ಳಲಾಗಿದೆ. ಪರಿಶಿಷ್ಟ ಜಾತಿ ಮತ್ತು ಪಂಗಡದವರ ಅಭಿವೃದ್ಧಿಗಾಗಿ ಪ್ರಸಕ್ತ ಸಾಲಿನಲ್ಲಿ ಎಸ್.ಸಿ.ಪಿ / ಟಿ.ಎಸ್.ಪಿ ಅಡಿ 29 ಸಾವಿರ ಕೋಟಿ ರೂಪಾಯಿಗಳನ್ನು ಒದಗಿಸಲಾಗಿದೆ.

18) ಅಮೃತ ಜ್ಯೋತಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಬಿಪಿಎಲ್ ಕುಟುಂಬಗಳಿಗೆ ಮಾಸಿಕ 75 ಯೂನಿಟ್‌ಗಳಷ್ಟು ಉಚಿತ ವಿದ್ಯುತ್ ನೀಡಲಾಗುತ್ತಿದೆ. ವಸತಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ನೀಡಲಾಗುವ ಸಹಾಯಧನವನ್ನು 1.75 ಲಕ್ಷ ರೂಪಾಯಿಗಳಿಂದ 2 ಲಕ್ಷ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ. 100 ಅಂಬೇಡ್ಕರ್ ಹಾಸ್ಟೆಲ್‌ಗಳ ನಿರ್ಮಾಣವನ್ನೂ ಕೈಗೆತ್ತಿಕೊಳ್ಳಲಾಗಿದೆ. ಪ್ರಬುದ್ಧ ಯೋಜನೆಯಡಿ ಪರಿಶಿಷ್ಟಜಾತಿ ಮತ್ತು ಪಂಗಡದ 133 ವಿದ್ಯಾರ್ಥಿಗಳನ್ನು ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣಕ್ಕಾಗಿ ಪ್ರಾಯೋಜಿಸಲಾಗಿದೆ.

19) ವಿವಿಧ ಇಲಾಖೆಗಳ ಅಭಿವೃದ್ಧಿ ನಿಗಮಗಳ ಆರ್ಥಿಕ ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ಪರಿಶಿಷ್ಟಜಾತಿ / ಪರಿಶಿಷ್ಟ ಪಂಗಡದ ಮಹಿಳೆಯರಿಗೆ ಶೇಕಡ 25ರಷ್ಟು ಪಾಲನ್ನು ಮೀಸಲಿರಿಸಲಾಗಿದೆ. ಭೂ ಒಡೆತನ ಯೋಜನೆಯಡಿ ಘಟಕ ವೆಚ್ಚ 15 ಲಕ್ಷ ಮತ್ತು 20 ಲಕ್ಷ ರೂಪಾಯಿಗಳಿದ್ದು, ಅದನ್ನು 20 ಲಕ್ಷ ರೂಪಾಯಿ ಹಾಗೂ 25 ಲಕ್ಷ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ.

20) ಪರಿಶಿಷ್ಟಜಾತಿ ಮತ್ತು ಪಂಗಡದ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ ಮತ್ತು ವಸತಿ ಶಾಲೆಗಳ ವಿದ್ಯಾರ್ಥಿನಿಯರಿಗೆ ಅವರ ಆತ್ಮಸ್ಥೈರ್ಯ ಹೆಚ್ಚಿಸಲು "ಓಬವ್ವ ಆತ್ಮ ರಕ್ಷಣಾ ಕಲೆ" ತರಬೇತಿಯನ್ನು ಪ್ರಾರಂಭಿಸಲಾಗಿದ್ದು, ಒಟ್ಟು 106314 ವಿದ್ಯಾರ್ಥಿನಿಯರಿಗೆ "ಆತ್ಮ ರಕ್ಷಣಾ ಕಲೆ" ತರಬೇತಿಯನ್ನು ನೀಡಲಾಗುತ್ತಿದೆ. ಮೆಟ್ರಿಕ್-ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕೆ ಹೆಚ್ಚಿನ ಬೇಡಿಕೆ ಇದ್ದುದರಿಂದ, 2022-23ನೇ ಸಾಲಿನಲ್ಲಿ

ಶೇಕಡಾ 25 ರಂತೆ ಸಂಖ್ಯಾಬಲವನ್ನು ಹೆಚ್ಚಳ ಮಾಡಿ, ಹಾಲಿ ಮಂಜೂರಾತಿ ಸಂಖ್ಯೆಗೆ ಹೆಚ್ಚುವರಿಯಾಗಿ 30000 ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ. ಇಲಾಖಾ ವಿದ್ಯಾರ್ಥಿ ನಿಲಯಗಳ ಸ್ವಂತ ಕಟ್ಟಡ ನಿರ್ಮಾಣಕ್ಕೆ 150 ಕೋಟಿ ರೂಪಾಯಿಗಳ ಅನುದಾನ ಒದಗಿಸಿದ್ದು, ಈ ಪೈಕಿ ಡಿಸೆಂಬರ್ ಅಂತ್ಯಕ್ಕೆ ಬಿಡುಗಡೆಯಾದ ರೂ.129.00 ಕೋಟಿಗಳ ಅನುದಾನದಲ್ಲಿ ರೂ.101.68 ಕೋಟಿಗಳನ್ನು ವೆಚ್ಚ ಮಾಡಲಾಗಿದ್ದು, 50 ವಿದ್ಯಾರ್ಥಿ ನಿಲಯಗಳ ಸ್ವಂತ ಕಟ್ಟಡ ನಿರ್ಮಾಣ ಕಾರ್ಯ ಪೂರ್ಣಗೊಂಡಿರುತ್ತದೆ. 2022-23ನೇ ಸಾಲಿನಲ್ಲಿ 250 ಕೋಟಿ ರೂಪಾಯಿಗಳ ವೆಚ್ಚದಲ್ಲಿ 100 ಸಂಖ್ಯಾಬಲದ 50 ಕನಕದಾಸ ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣ ಕಾಮಗಾರಿ ಕೈಗೊಳ್ಳಲು ಕ್ರಮ ವಹಿಸಲಾಗಿರುತ್ತದೆ.

21) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ, ಅಲ್ಪಸಂಖ್ಯಾತ ಮತ್ತು ಇತರೆ ವರ್ಗದ ಮಕ್ಕಳಲ್ಲಿ ಉನ್ನತ ವಿದ್ಯಾಭ್ಯಾಸವನ್ನು ಪ್ರೋತ್ಸಾಹಿಸಲು "ದೀನ ದಯಾಳ್ ಉಪಾಧ್ಯಾಯ ಸೌಹಾರ್ದ ವಿದ್ಯಾರ್ಥಿ ನಿಲಯ" ಎಂಬ ಹೊಸ ಯೋಜನೆಯಡಿ ಶೈಕ್ಷಣಿಕ ಕೇಂದ್ರಗಳಾದ ಬೆಳಗಾವಿ, ಹುಬ್ಬಳ್ಳಿ-ಧಾರವಾಡ, ಕಲಬುರಗಿ, ಮಂಗಳೂರು ಮತ್ತು ಮೈಸೂರಿನಲ್ಲಿ ತಲಾ 1000 ಸಾಮರ್ಥ್ಯದ ಬಹುಮಹಡಿಯ ವಿದ್ಯಾರ್ಥಿ ನಿಲಯ ಸಮುಚ್ಚಯಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗಿದೆ.

22) ಬೆಳಗಾವಿ ಜಿಲ್ಲೆಯಲ್ಲಿ ಕೇಂದ್ರ ರಕ್ಷಣಾ ಸಚಿವಾಲಯದ ಸಹಯೋಗದೊಂದಿಗೆ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆಯನ್ನು ಸ್ಥಾಪಿಸಲಾಗಿದೆ.

23) ನನ್ನ ಸರ್ಕಾರವು ರಾಜ್ಯದ 29 ಸ್ಥಳಗಳಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗಾಗಿ 6 ರಿಂದ 12ನೇ ತರಗತಿಯವರೆಗೆ ಸಿ.ಬಿ.ಎಸ್.ಇ ಪಠ್ಯಕ್ರಮದೊಂದಿಗೆ ಡಾ|| ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆಗಳನ್ನು ಪ್ರಾರಂಭಿಸಿದೆ. ಅಲ್ಪಸಂಖ್ಯಾತ ಸಮುದಾಯದ ಎಲ್ಲಾ ಕುಂದುಕೊರತೆಗಳನ್ನು ಬಗೆಹರಿಸಲು 24/7 ಸಹಾಯವಾಣಿ ಕೇಂದ್ರವನ್ನು ಪ್ರಾರಂಭಿಸಲಾಗಿದೆ. ಜೈನ್, ಬೌದ್ಧ, ಸಿಖ್ ಮತ್ತು ಕ್ರೈಸ್ತ ಸಮುದಾಯದ ದೇವಾಲಯ / ಚರ್ಚ್ ನವೀಕರಣ, ದುರಸ್ತಿ / ಜೀರ್ಣೋದ್ಧಾರಕ್ಕಾಗಿ / ಸಮುದಾಯ ಭವನ ಕಟ್ಟಡ ನಿರ್ಮಾಣ ಮತ್ತು ಅನಾಥಾಶ್ರಮ ಮತ್ತು ವೃದ್ಧಾಶ್ರಮಗಳಿಗೆ ಅಂದಾಜು 26 ಕೋಟಿ ರೂಪಾಯಿಗಳ ವೆಚ್ಚದಲ್ಲಿ 186 ಸಂಸ್ಥೆಗಳಿಗೆ ಸಹಾಯಧನ ನೀಡಿದೆ. ವಕ್ಫ್ ಆಸ್ತಿಗಳ ಡ್ರೋನ್ ಸರ್ವೇ ಕಾರ್ಯಕ್ಕಾಗಿ 2.5 ಕೋಟಿ ರೂಪಾಯಿಗಳನ್ನು ಒದಗಿಸಿದೆ. ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತ ಆಯೋಗ ಮತ್ತು ಕರ್ನಾಟಕ ಉರ್ದು ಅಕಾಡೆಮಿ ಕಛೇರಿಗಳ ಉದ್ದೇಶಕ್ಕಾಗಿ 17.30 ಕೋಟಿ ರೂಪಾಯಿ ವೆಚ್ಚದಲ್ಲಿ ಕೆ.ಎಂ.ಡಿ.ಸಿ ಭವನವನ್ನು ನಿರ್ಮಿಸಲಾಗಿದೆ. ಕರ್ನಾಟಕ ಉರ್ದು ಅಕಾಡೆಮಿಯ ವತಿಯಿಂದ ಶಾಸ್ತ್ರೀಯ ಭಾಷೆಗಳ ಉತ್ಕೃಷ್ಟ ಸಾಹಿತ್ಯದ ಪುಸ್ತಕಗಳನ್ನು ಉರ್ದು ಭಾಷೆಗೆ ಅನುವಾದ ಮಾಡುವ ಪ್ರಕ್ರಿಯೆಯು ಜಾರಿಯಲ್ಲಿದೆ.

24) ನನ್ನ ಸರ್ಕಾರವು ಮಹಿಳೆ ಮತ್ತು ಮಕ್ಕಳ ಬಗ್ಗೆ ಕಾಳಜಿ ಹೊಂದಿದ್ದು, ಅವರ ಭದ್ರತೆ ಮತ್ತು ಶ್ರೇಯೋಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಇದಕ್ಕಾಗಿ, ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿಯಲ್ಲಿ ಗರ್ಭಿಣಿಯರು, ಬಾಣಂತಿಯರು, 6 ತಿಂಗಳಿನಿಂದ 6 ವರ್ಷದ ಮಕ್ಕಳನ್ನು ಒಳಗೊಂಡಂತೆ ಸುಮಾರು 52 ಲಕ್ಷ ಫಲಾನುಭವಿಗಳಿಗೆ ಪೂರಕ

ಪೌಷ್ಟಿಕ ಆಹಾರವನ್ನು ಒದಗಿಸಲಾಗುತ್ತಿದೆ. ತೀವ್ರ ಅಪೌಷ್ಟಿಕ ಮಕ್ಕಳಿಗೆ ನೀಡಲಾಗುತ್ತಿದ್ದ ಕ್ಷೀರಭಾಗ್ಯ ಮತ್ತು ಸೃಷ್ಠಿ ಯೋಜನೆಯನ್ನು ಸಾಧಾರಣ ಅಪೌಷ್ಟಿಕ ಮಕ್ಕಳಿಗೂ ವಿಸ್ತರಿಸಲಾಗಿದೆ. ಅಮೃತ ಅಂಗನವಾಡಿ ಯೋಜನೆಯಡಿ ಆಯ್ದ 750 ಅಂಗನವಾಡಿ ಕೇಂದ್ರಗಳನ್ನು ಮೂಲಸೌಕರ್ಯಗಳೊಂದಿಗೆ ಮೇಲ್ದರ್ಜೆಗೇರಿಸಲು ಪ್ರತಿ ಅಂಗನವಾಡಿಗೆ 1 ಲಕ್ಷ ರೂಪಾಯಿಯಂತೆ 7.5 ಕೋಟಿ ರೂಪಾಯಿ ನೆರವು ಒದಗಿಸಲಾಗಿದೆ. ರಾಜ್ಯ ಸರ್ಕಾರದ ಅನುದಾನದಲ್ಲಿಯೇ ಬೇಡಿಕೆಗಳಿಗೆ ಅನುಸಾರವಾಗಿ ಒಟ್ಟು 4244 ಹೊಸ ಅಂಗನವಾಡಿ ಕೇಂದ್ರಗಳನ್ನು 268.98 ಕೋಟಿ ರೂಪಾಯಿಗಳಲ್ಲಿ ಪ್ರಾರಂಭಿಸಲು ಮಂಜೂರಾತಿ ನೀಡಲಾಗಿದೆ.

25) ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರುಗಳಿಗೆ ನೀಡಲಾಗುತ್ತಿರುವ ಗೌರವಧನವನ್ನು ಅವರುಗಳು ಸಲ್ಲಿಸಿರುವ ಸೇವಾ ಅವಧಿಯ ಆಧಾರದ ಮೇರೆಗೆ ಕನಿಷ್ಠ ರೂ.1000 ರಿಂದ ರೂ.1500 ರವರೆಗೆ ಹೆಚ್ಚಿಸಲಾಗಿದೆ. ಬಾಲ್ಯ ವಿವಾಹವನ್ನು ತಡೆಗಟ್ಟುವ ಉದ್ದೇಶದಿಂದ ಕೊಪ್ಪಳ ಜಿಲ್ಲೆಯಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಿರುವ "ಸ್ಫೂರ್ತಿ" ಯೋಜನೆಯನ್ನು ಬಾಗಲಕೋಟೆ, ವಿಜಯಪುರ, ರಾಯಚೂರು, ಬೆಳಗಾವಿ ಮತ್ತು ಕಲಬುರಗಿ ಜಿಲ್ಲೆಯಲ್ಲಿನ 11 ತಾಲ್ಲೂಕುಗಳಲ್ಲಿ 12.5 ಕೋಟಿ ರೂಪಾಯಿಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಲಿಂಗತ್ವ ಅಲ್ಪಸಂಖ್ಯಾತರನ್ನು ಸಮಾಜದ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ 3403 ಲಿಂಗತ್ವ ಅಲ್ಪಸಂಖ್ಯಾತರ ವಸತಿ ರಹಿತರಿಗೆ ಡಾ: ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ ಮತ್ತು ದೇವರಾಜು ಅರಸು ವಸತಿ ಯೋಜನೆಯಡಿ 3403 ಮನೆಗಳನ್ನು ಮಂಜೂರು ಮಾಡಲಾಗಿದೆ.



Form No:2 SideA

26) ನನ್ನ ಸರ್ಕಾರದ ಆದ್ಯತೆಯು ಸಾರ್ವಜನಿಕರಿಗೆ ಗುಣಮಟ್ಟದ ಪ್ರಾಥಮಿಕ ಆರೋಗ್ಯ ಸೇವೆಯನ್ನು ನಿರಂತರವಾಗಿ ಸುಧಾರಿಸುವಲ್ಲಿ ಕೇಂದ್ರೀಕೃತವಾಗಿದೆ. ಆರೋಗ್ಯ ಸೇವೆಗಳನ್ನು ಬಲಪಡಿಸಲು ಹಾಗೂ ಜನರಿಗೆ ಸ್ಥಳೀಯವಾಗಿಯೇ ತಜ್ಞರ ಸೇವೆಯನ್ನು ಒದಗಿಸುವ ನಿಟ್ಟಿನಲ್ಲಿ 53 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳಾಗಿ ಉನ್ನತೀಕರಿಸಲಾಗಿದೆ. 47 ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದ್ದು, 26 ತಾಲ್ಲೂಕು ಆಸ್ಪತ್ರೆ ಹಾಗೂ 1 ಜಿಲ್ಲಾ ಆಸ್ಪತ್ರೆಗಳನ್ನು ಉನ್ನತೀಕರಿಸಲಾಗುತ್ತಿದೆ. ಇದಕ್ಕಾಗಿ ಒಟ್ಟು 781.30 ಕೋಟಿ ರೂಪಾಯಿಗಳನ್ನು ಒದಗಿಸಲಾಗಿದೆ. 45 ತಾಲ್ಲೂಕು ಆಸ್ಪತ್ರೆಗಳನ್ನು 3 ಜಯದೇವ ಹೃದ್ರೋಗ ಸಂಸ್ಥೆಗಳೊಂದಿಗೆ ಮ್ಯಾಪಿಂಗ್ ಮಾಡುವ ಮೂಲಕ ಸ್ಥಳೀಯವಾಗಿ ಹೃದ್ರೋಗ ಚಿಕಿತ್ಸೆ ಒದಗಿಸಲು ಕ್ರಮವಹಿಸಲಾಗಿದೆ.

27) ಮಾನಸಿಕ ಆರೋಗ್ಯವನ್ನು ಕಾಪಾಡುವಲ್ಲಿ ಕರ್ನಾಟಕವು ಪ್ರವರ್ತಕವಾಗಿದೆ ಮತ್ತು ನನ್ನ ಸರ್ಕಾರವು ಮೇ 2022 ರಂದು ಗುಜರಾತ್ ನಲ್ಲಿ ನಡೆಯಲಾದ "ಸ್ವಾಸ್ಥ್ಯ ಚಿಂತನ್ ಶಿವಿರ್" ದಲ್ಲಿ ಇ-ಮನಸ್ ಉಪಕ್ರಮವನ್ನು ರಾಜ್ಯದ ಅತ್ಯುತ್ತಮ ಅಭ್ಯಾಸ ಎಂದು ಪ್ರಸ್ತುತ ಪಡಿಸಿರುತ್ತದೆ.

28) ರಾಜ್ಯದ ನಗರ ಪ್ರದೇಶಗಳಲ್ಲಿ 438 ನಮ್ಮ ಕ್ಲಿನಿಕ್‌ಗಳನ್ನು ಸ್ಥಾಪಿಸಲು ಅನುಮೋದನೆ ನೀಡಲಾಗಿದ್ದು, 271 ನಮ್ಮ ಕ್ಲಿನಿಕ್ ಗಳು ಕಾರ್ಯಾರಂಭ ಮಾಡಿವೆ. ಅನುಮೋದನೆಯಾಗಿರುವ 128 ಮಹಿಳಾ ಸ್ವಾಸ್ಥ್ಯ ಕೇಂದ್ರಗಳಲ್ಲಿ 53 ಮಹಿಳಾ ಸ್ವಾಸ್ಥ್ಯ ಕೇಂದ್ರಗಳು ಸಾರ್ವಜನಿಕ ಸೇವೆಗೆ ಸಿದ್ಧವಿದ್ದು, ಶೀಘ್ರದಲ್ಲಿಯೇ ಲೋಕಾರ್ಪಣೆಗೊಳ್ಳಲಿವೆ.

29) ನನ್ನ ಸರ್ಕಾರವು 450 ಹಾಸಿಗೆಗಳ ಸಾಮರ್ಥ್ಯದ ಆಸ್ಪತ್ರೆಯನ್ನು ಚಾಮರಾಜನಗರದಲ್ಲಿ ಕಾರ್ಯಾರಂಭ ಮಾಡಿದ್ದು, ಕೊಡಗು ಮತ್ತು ಕಾರವಾರ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಸ್ಥಾಪಿಸಲು ಕ್ರಮ ಕೈಗೊಂಡಿದ್ದು, ಕಟ್ಟಡ ನಿರ್ಮಾಣ ಪ್ರಗತಿಯಲ್ಲಿದೆ. ಪ್ರಸಕ್ತ ವರ್ಷದಲ್ಲಿ ಕೇಂದ್ರ ಸಹಭಾಗಿತ್ವದೊಂದಿಗೆ ಹಾವೇರಿ, ಯಾದಗಿರಿ, ಚಿಕ್ಕಮಗಳೂರು ಮತ್ತು ಚಿಕ್ಕಬಳ್ಳಾಪುರದಲ್ಲಿ 150 ಸೀಟುಗಳ ಸಾಮರ್ಥ್ಯದ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲಾಗಿದೆ. ಬೆಂಗಳೂರಿನ ವಾಣಿವಿಲಾಸ ಆಸ್ಪತ್ರೆಯಲ್ಲಿ Fetal Medicine & Neonatology ವಿಭಾಗಗಳನ್ನು ಮತ್ತು ಮೈಸೂರು ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಟ್ರಾಮಾಕೇರ್ ಕೇಂದ್ರವನ್ನು ಆರಂಭಿಸಲು ಕ್ರಮಕೈಗೊಳ್ಳಲಾಗಿದೆ.

30) ದೇಶಾದ್ಯಂತ ಇತರೆ ರಾಜ್ಯಗಳು ಕಲ್ಲಿದ್ದಲು ಕೊರತೆಯಿಂದಾಗಿ ವಿದ್ಯುತ್ ಪೂರೈಕೆಯಲ್ಲಿ ತೀವ್ರ ವ್ಯತ್ಯಯದಿಂದ ಬಳಲುತ್ತಿದ್ದಾಗ ರಾಜ್ಯವು ಜಲ, ಪವನ ಹಾಗೂ ಸೌರ ವಿದ್ಯುತ್ ಮೂಲಗಳಿಂದ ಸಮರ್ಥವಾಗಿ ವಿದ್ಯುತ್ ಪೂರೈಕೆಯನ್ನು ಅಡಚಣೆಯಿಲ್ಲದೇ ನನ್ನ ಸರ್ಕಾರವು ನಿಭಾಯಿಸಿದೆ. 2022-23ನೇ ಸಾಲಿನ ವಿವಿಧ ವಿದ್ಯುತ್ ಉತ್ಪಾದನಾ ಮೂಲಗಳಿಂದ 58,588 MUs ಉತ್ಪಾದಿಸಲಾಗಿದೆ ಹಾಗೂ 2022-23ನೇ ಸಾಲಿನಲ್ಲಿ ಹೆಚ್ಚುವರಿಯಾಗಿ ಲಭ್ಯವಿದ್ದ 4326.45 MUs ವಿದ್ಯುತ್ ಮಾರಾಟದಿಂದ 2500 ಕೋಟಿ ರೂಪಾಯಿಗಳ ಹಣವನ್ನು ಗಳಿಸಲಾಗಿದೆ. ರಾಜ್ಯಕ್ಕೆ RPO ಗುರಿ – 21% ಇದ್ದು, ಸಾಧನೆ-30.49% ರಷ್ಟಾಗಿದೆ. RE Certificate ಮಾರಾಟದಿಂದ 370 ಕೋಟಿ ರೂಪಾಯಿಗಳ ಮೊತ್ತವನ್ನು ಗಳಿಸಲಾಗಿದೆ.

31) ಬೆಳಕು ಯೋಜನೆಯಡಿ 2.35 ಲಕ್ಷ ವಿದ್ಯುತ್ ರಹಿತ ಮನೆಗಳಿಗೆ 124 ಕೋಟಿ ರೂಪಾಯಿಗಳ ವೆಚ್ಚದಲ್ಲಿ ವಿದ್ಯುತ್ ಸಂಪರ್ಕವನ್ನು



Form No:2 SideB

ಕಲ್ಪಿಸಲಾಗಿದೆ. 2030 ರೊಳಗೆ 500 ಗಿಗಾ ವ್ಯಾಟ್ ಸಾಮರ್ಥ್ಯದ ನವೀಕರಿಸಬಹುದಾದ ಇಂಧನ ಯೋಜನೆಗಳನ್ನು ಅನುಷ್ಠಾನಗೊಳಿಸುವ ಗುರಿಯೊಂದಿಗೆ ನನ್ನ ಸರ್ಕಾರವು "ಕರ್ನಾಟಕ ನವೀಕರಿಸಬಹುದಾದ ಇಂಧನ ನೀತಿ 2022-27" ನ್ನು ಪ್ರಕಟಿಸಿದೆ. ರಾಜ್ಯವು ರಾಷ್ಟ್ರೀಯ ಇಂಧನ ಸಂರಕ್ಷಣಾ ಪ್ರಶಸ್ತಿ (NECA)– 2022ನ್ನು ಸನ್ಮಾನ್ಯ ರಾಷ್ಟ್ರಪತಿಗಳಿಂದ ಪಡೆದಿರುವುದನ್ನು ತಿಳಿಸಲು ಹರ್ಷಿಸುತ್ತೇನೆ.

32) ಸುಲಲಿತ ವ್ಯವಹಾರ ವಿಷಯದಲ್ಲಿ (Ease of Doing Business ನಲ್ಲಿ) ಕರ್ನಾಟಕವು ಅಗ್ರ ಸಾಧಕ ರಾಜ್ಯವಾಗಿ ಸ್ಥಾನ ಪಡೆದಿದೆ. 2021-22ನೇ ಸಾಲಿನಲ್ಲಿ 1,63,795 ಕೋಟಿ ರೂಪಾಯಿಗಳ ವಿದೇಶಿ ನೇರ ಹೂಡಿಕೆಯನ್ನು ರಾಜ್ಯವು ಆಕರ್ಷಿಸಿದ್ದು, ಇದು ದೇಶ ಸ್ವೀಕರಿಸಿದ ಒಟ್ಟು ಹೂಡಿಕೆಯ ಶೇಕಡ 38 ರಷ್ಟಿದ್ದು, ಕರ್ನಾಟಕವು ಮೊದಲ ಸ್ಥಾನದಲ್ಲಿದೆ. ಪ್ರಸಕ್ತ ಸಾಲಿನಲ್ಲಿ ಭಾರತದ ರಫ್ತಿಗೆ ರಾಜ್ಯವು 25.87 ಬಿಲಿಯನ್ ಅಮೇರಿಕ ಡಾಲರ್ ನಷ್ಟು ಕೊಡುಗೆ ನೀಡಿದ್ದು, ಇದು ಈವರೆಗಿನ ಅತ್ಯಧಿಕ ಮೊತ್ತವಾಗಿದ್ದು, ರಫ್ತು ಮಾಡುವ ಮೊದಲ 4 ರಾಜ್ಯಗಳಲ್ಲಿ ಕರ್ನಾಟಕ ಒಂದಾಗಿದೆ.

33) ನವೆಂಬರ್ 2022ರಲ್ಲಿ ಬೆಂಗಳೂರಿನಲ್ಲಿ ಜರುಗಿದ ಇನ್ವೆಸ್ಟ್ ಕರ್ನಾಟಕ – ಬಂಡವಾಳ ಹೂಡಿಕೆದಾರರ ಸಮಾವೇಶ ಕಾರ್ಯಕ್ರಮದಲ್ಲಿ ಒಟ್ಟು 9,81,784 ಕೋಟಿ ಬಂಡವಾಳ ಹೂಡಿಕೆಯನ್ನು ಆಕರ್ಷಿಸಿದೆ. ರಾಜ್ಯದಲ್ಲಿ ನಿರುದ್ಯೋಗವನ್ನು ಕಡಿಮೆ ಮಾಡಲು ಕರ್ನಾಟಕದ ಹೆಚ್ಚಿನ ಸಂಖ್ಯೆಯ ಉದ್ಯೋಗಿಗಳಿಗೆ ಉದ್ಯೋಗಾವಕಾಶಗಳನ್ನು ಒದಗಿಸಲು ರಾಜ್ಯ ಸರ್ಕಾರವು ಕರ್ನಾಟಕ ಉದ್ಯೋಗ ನೀತಿ 2022-25 ನ್ನು ಘೋಷಿಸಿದೆ.

34) ಇದಲ್ಲದೇ ಹೆಚ್ಚಿನ ಹೂಡಿಕೆ ಆಕರ್ಷಿಸುವ ನಿಟ್ಟಿನಲ್ಲಿ ಡಿಫೆನ್ಸ್ ಮತ್ತು ಏರೋಸ್ಪೇಸ್ ನೀತಿ ವಿಶೇಷ ಹೂಡಿಕೆ ಪ್ರದೇಶ ಕಾಯಿದೆ 2022 ಮೊದಲಾದ ಉಪಕ್ರಮಗಳನ್ನು ಕೈಗೊಳ್ಳಲಾಗಿದೆ.

35) ನನ್ನ ಸರ್ಕಾರವು ಜವಳಿ ಮತ್ತು ಸಿದ್ಧ ಉಡುಪು ಉದ್ಯಮಗಳನ್ನು ಉತ್ತೇಜಿಸಲು ರಾಜ್ಯದ ನವಲಗುಂದ, ರಾಣಿಬೆನ್ನೂರು ಹಾಗೂ ಶಿಗ್ಗಾಂವಿಯಲ್ಲಿ ಜವಳಿ ಪಾರ್ಕ್‌ಗಳ ನಿರ್ಮಾಣಕ್ಕೆ ಕ್ರಮ ಕೈಗೊಂಡಿದೆ. ಇದಲ್ಲದೆ ನೇಕಾರರ ಸಂಕಷ್ಟಕ್ಕೆ ನೆರವಾಗಲು ರೂಪಿಸಿದ ನೇಕಾರ ಸಮ್ಮಾನ್ ಯೋಜನೆಯಡಿ ಕೈಮಗ್ಗಕ್ಕೆ ನೀಡಲಾಗುತ್ತಿದ್ದ ನೆರವಿನ ಮೊತ್ತವನ್ನು ರೂ.2000 ಗಳಿಂದ ರೂ.5000 ಗಳಿಗೆ ಹೆಚ್ಚಿಸಲಾಗಿದೆ. ಅಲ್ಲದೇ ಈ ನೆರವನ್ನು 1.03 ಲಕ್ಷ ವಿದ್ಯುತ್ ಕೈಮಗ್ಗ ನೇಕಾರರಿಗೂ/ಕಾರ್ಮಿಕರಿಗೂ ವಿಸ್ತರಿಸಲಾಗಿದೆ.

36) ಯಾವುದೇ ರಾಜ್ಯದ ಏಳಿಗೆಗೆ ಮೂಲ ಸೌಲಭ್ಯಗಳನ್ನು ಅಭಿವೃದ್ಧಿಗೊಳಿಸುವುದು ಅನಿವಾರ್ಯವಾಗಿದೆ. ನನ್ನ ಸರ್ಕಾರವು ರಾಜ್ಯದಲ್ಲಿ ಪರಿಣಾಮಕಾರಿ ವಾಯುಯಾನ ಸೌಲಭ್ಯ ಕಲ್ಪಿಸಲು ಕ್ರಮ ಕೈಗೊಳ್ಳುತ್ತಿದ್ದು, ಶಿವಮೊಗ್ಗ ವಿಮಾನ ನಿಲ್ದಾಣವು ಶೀಘ್ರದಲ್ಲೇ ಉದ್ಘಾಟನೆಯಾಗಲಿದ್ದು, ವಿಜಯಪುರ ಮತ್ತು ಹಾಸನ ವಿಮಾನ ನಿಲ್ದಾಣಗಳ ಕಾಮಗಾರಿ ಪ್ರಗತಿಯಲ್ಲಿದೆ. ರಾಯಚೂರು ವಿಮಾನ ನಿಲ್ದಾಣ ನಿರ್ಮಾಣ ಪ್ರಕ್ರಿಯೆ ಪ್ರಾರಂಭವಾಗಿದ್ದು, ದಾವಣಗೆರೆ ಮತ್ತು ಕೊಪ್ಪಳ ವಿಮಾನ ನಿಲ್ದಾಣ ಯೋಜನೆಗಳನ್ನು ಮುಂದಿನ ಸಾಲಿನಲ್ಲಿ ಕೈಗೆತ್ತಿಕೊಳ್ಳಲಾಗುವುದು. ಕೇಂದ್ರ ರೈಲ್ವೇ ಸಚಿವಾಲಯದೊಂದಿಗೆ 50:50 ವೆಚ್ಚದ ಹಂಚಿಕೆಯ ಆಧಾರದ ಮೇಲೆ 9 ಹೊಸ ರೈಲು ಮಾರ್ಗಗಳ ಯೋಜನೆಗಳನ್ನು ತೆಗೆದುಕೊಳ್ಳಲಾಗುತ್ತಿದೆ.

ಮೈಸೂರು ಬೆಂಗಳೂರು ಚೆನ್ನೈ ಸೆಮಿ-ಹೈಸ್ಪೀಡ್ ರೈಲು ಸೇವೆ ವಂದೇ ಭಾರತ್ ಎಕ್ಸ್‌ಪ್ರೆಸ್ ಪ್ರಾರಂಭಿಸಲಾಗಿದೆ.

37) ರಾಜ್ಯದ ಸಣ್ಣ ಬಂದರುಗಳು 6 ಲಕ್ಷ ಟನ್‌ಗಳಿಗಿಂತ ಹೆಚ್ಚು ಸರಕುಗಳನ್ನು ನಿರ್ವಹಿಸಿದೆ. ಭಾರತ ಸರ್ಕಾರದ ಸಾಗರಮಾಲಾ ಯೋಜನೆಯಿಂದ ಅನುಮೋದನೆ ಮತ್ತು ಆರ್ಥಿಕ ನೆರವು ಪಡೆದ ನಂತರ 12 ಕಾಮಗಾರಿಗಳ ಅನುಷ್ಠಾನವನ್ನು ಕೈಗೊಳ್ಳಲಾಗಿದೆ. ಸಾರ್ವಜನಿಕ ಖಾಸಗಿ ಸಹಭಾಗಿತ್ವದ ಅಡಿಯಲ್ಲಿ ಎರಡು ಪ್ರಮುಖ ಬಂದರುಗಳನ್ನು ತೆಗೆದುಕೊಳ್ಳಲು ರಾಜ್ಯವು ಕ್ರಮಗಳನ್ನು ಪ್ರಾರಂಭಿಸಿದೆ. ಉತ್ತರ ಕನ್ನಡ ಜಿಲ್ಲೆಯ ಕೇಣಿ ಬಂದರಿನಲ್ಲಿ 30 MTPA ಸಾಮರ್ಥ್ಯದ ಹಾಗೂ ಪಾವಿನಕುರ್ವೆ ಬಂದರಿನಲ್ಲಿ 14 MTPA ಸಾಮರ್ಥ್ಯದ Deep Water All Weather Green Field ಬಂದರಿನ ಅಭಿವೃದ್ಧಿಗೆ ಬಿಡ್‌ಗಳನ್ನು ಆಹ್ವಾನಿಸಲಾಗಿದೆ.

38) ರಾಜ್ಯದ ರಾಜಧಾನಿಯಾದ ಬೆಂಗಳೂರು ನಗರವನ್ನು ವಿಶ್ವಮಟ್ಟದಲ್ಲಿ ಗುರುತಿಸಲಾಗಿದೆ. ಅದಕ್ಕಾಗಿ, ಬೆಂಗಳೂರು ನಗರದ ಮೂಲಸೌಲಭ್ಯ ಮತ್ತು ಅಭಿವೃದ್ಧಿಗೆ ಒತ್ತುಕೊಟ್ಟು ಹಲವು ಕ್ರಮಗಳನ್ನು ನನ್ನ ಸರ್ಕಾರವು ನಿರಂತರವಾಗಿ ಕೈಗೊಳ್ಳುತ್ತಿದೆ. ಸರ್ಕಾರವು 8000 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಬೆಂಗಳೂರು ನಗರದಾದ್ಯಂತ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಳಾದ ರಸ್ತೆಗಳು, ಮಳೆ ನೀರು ಚರಂಡಿಗಳು, ಮೇಲ್ಸೇತುವೆಗಳು, ಕೆಳ ಸೇತುವೆಗಳು ಮತ್ತು ಇತರ ಸಾರ್ವಜನಿಕ ಉಪಯುಕ್ತ ಯೋಜನೆಗಳನ್ನು ಈ ಅನುದಾನದಲ್ಲಿ ಉಪಯೋಗಿಸಲಾಗುತ್ತಿದ್ದು, ಕಾಮಗಾರಿಗಳು ಪ್ರಗತಿಯಲ್ಲಿವೆ. ಬಿಬಿಎಂಪಿ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಯನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಪ್ರತ್ಯೇಕ ಬೆಂಗಳೂರು

ಘನತ್ಯಾಜ್ಯ ನಿರ್ವಹಣಾ ಲಿ., ಕಂಪನಿಯನ್ನು ಸ್ಥಾಪಿಸಲಾಗಿದೆ. ಬೆಂಗಳೂರು ಮೆಟ್ರೋ ರೈಲು ಯೋಜನೆಯು ಮೈಸೂರು ರಸ್ತೆಯಿಂದ ಕೆಂಗೇರಿವರೆಗಿನ 7.53 ಕಿ.ಮೀ.ಗಳ ಮತ್ತು ಯಲಚೇನಹಳ್ಳಿಯಿಂದ ಸಿಲ್ಕ್ ಇನ್ಸ್‌ಸ್ಟಿಟ್ಯೂಟ್‌ವರೆಗೆ 6.12 ಕಿ.ಮೀ. ಸೇರಿ ಒಟ್ಟು 13.65 ಕಿ.ಮೀ. ಕಾಮಗಾರಿ ಪೂರ್ಣಗೊಂಡು ಕಾರ್ಯಾರಂಭಗೊಂಡಿದೆ. ಬೈಯಪ್ಪನಹಳ್ಳಿಯಿಂದ ವೈಟ್‌ಫೀಲ್ಡ್ ವರೆಗಿನ 15.81 ಕಿ.ಮೀ. ಉದ್ದದ ಕಾಮಗಾರಿಗಳು ಮಾರ್ಚ್ 2023 ರ ವೇಳೆಗೆ ಕಾರ್ಯಾರಂಭ ಮಾಡಲಾಗುವುದು. ಹೊರ ವರ್ತುಲ ರಸ್ತೆ – ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣದ ಮೆಟ್ರೋ ಕಾಮಗಾರಿಗಳು ಪ್ರಗತಿಯಲ್ಲಿವೆ.

39) ಕೊಳಚೆ ಪ್ರದೇಶಗಳಲ್ಲಿ ವಾಸಿಸುವ 1.03 ಲಕ್ಷ ಕುಟುಂಬಗಳಿಗೆ ಹಾಗೂ ಎಸ್.ಸಿ/ಎಸ್.ಟಿ ಕಾಲೋನಿಗಳಿಗೆ 10,000 ಲೀಟರ್ ಉಚಿತ ನೀರು ಒದಗಿಸಲಾಗುತ್ತಿದೆ. ಅರ್ಕಾವತಿ ಲೇ-ಔಟ್, ಡಾ: ಶಿವರಾಮ ಕಾರಂತ ಬಡಾವಣೆ, ನಾಡಪ್ರಭು ಕೆಂಪೇಗೌಡ ಲೇ-ಔಟ್ ಮತ್ತು ಇತರೆ ವಸತಿ ಯೋಜನೆಗಳನ್ನು ಬಿ.ಡಿ.ಎ. ಕೈಗೆತ್ತಿಕೊಂಡಿದೆ. ತುಮಕೂರು ರಸ್ತೆಯಿಂದ ಬಳ್ಳಾರಿ ರಸ್ತೆ ಹಾಗೂ ಹಳೇ ಮದ್ರಾಸ್ ರಸ್ತೆಯನ್ನು ಹಾದುಹೋಗಿ ಹೊಸೂರು ರಸ್ತೆವರೆಗೆ 100 ಮೀಟರ್ ಅಗಲದ 8 ಪಥದ ಪೆರಿಫೆರಲ್ ರಿಂಗ್ ರಸ್ತೆ ನಿರ್ಮಾಣ ಮಾಡಲು ಕ್ರಮಕೈಗೊಳ್ಳಲಾಗುತ್ತಿದೆ. ಬೆಂಗಳೂರು ಸಬ್ ಅರ್ಬನ್ ರೈಲು ಯೋಜನೆಯು ಪ್ರಗತಿಯಲ್ಲಿದೆ. ಇದು ಸಂಚಾರ ದಟ್ಟಣೆಯನ್ನು ಕಡಿಮೆ ಮಾಡುತ್ತದೆ ಮತ್ತು ಸಾರ್ವಜನಿಕರಿಗೆ ಅನುಕೂಲವಾಗುತ್ತದೆ. ಬೆಂಗಳೂರು ಮಹಾನಗರದ ಸಂಚಾರ ದಟ್ಟಣೆ ನಿವಾರಣೆಗೆ ಸಂಬಂಧಿಸಿದ ವಿವಿಧ ಸಂಸ್ಥೆಗಳನ್ನು ಒಗ್ಗೂಡಿಸಿ ಕ್ರಮಕೈಗೊಳ್ಳಲು ಬೆಂಗಳೂರು ಮಹಾನಗರ ಭೂ-ಸಾರಿಗೆ ಪ್ರಾಧಿಕಾರ ಕಾಯ್ದೆಯನ್ನು ಜಾರಿಗೆ ತರಲಾಗುತ್ತಿದೆ.

40) 3885 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಮುಖ್ಯಮಂತ್ರಿಗಳ ನಗರೋತ್ಥಾನ-4 ಅನ್ನು 302 ಪಟ್ಟಣಗಳಲ್ಲಿ ಅನುಷ್ಠಾನಗೊಳಿಸಲಾಗಿದೆ. ಅಮೃತ್-2 ಮತ್ತು ಎಸ್.ಬಿ.ಎಂ-2 ಅನ್ನು ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೀರು ಸರಬರಾಜು ಮತ್ತು ನೈರ್ಮಲ್ಯ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ. 15ನೇ ಹಣಕಾಸು ಆಯೋಗದ ಅನುದಾನವನ್ನು ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಾಲಿ ಇರುವ ಮೂಲಸೌಕರ್ಯಗಳನ್ನು ಉನ್ನತೀಕರಿಸಲು ಬಳಸಿಕೊಳ್ಳಲಾಗುತ್ತಿದೆ.

41) ನನ್ನ ಸರ್ಕಾರವು ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 11333 ಪೌರಕಾರ್ಮಿಕರ ಸೇವೆಯನ್ನು ನೇರ ಪಾವತಿ ವ್ಯವಸ್ಥೆಯಡಿ ಖಾಯಂಗೊಳಿಸಲು ಆದೇಶ ಹೊರಡಿಸುವ ಕ್ರಾಂತಿಕಾರಕ ಹೆಜ್ಜೆಯನ್ನಿಟ್ಟಿದ್ದು, ಪ್ರಕ್ರಿಯೆ ಜಾರಿಯಲ್ಲಿದೆ.

42) ನನ್ನ ಸರ್ಕಾರವು ಕಾರ್ಮಿಕರಿಗಾಗಿ ಸಾಕಷ್ಟು ಯೋಜನೆಗಳನ್ನು ಜಾರಿಗೆ ತಂದಿದೆ. ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಪ್ರಸಕ್ತ ಸಾಲಿನಲ್ಲಿ 5,11,687 ಕಾರ್ಮಿಕರನ್ನು ಮಂಡಳಿಯ ಫಲಾನುಭವಿಗಳಾಗಿ ಹೊಸದಾಗಿ ನೋಂದಾಯಿಸಲಾಗಿರುತ್ತದೆ. ಈ ಮಂಡಳಿಯ ವತಿಯಿಂದ ಕಾರ್ಮಿಕರ ಆರೋಗ್ಯವನ್ನು ಕಾಪಾಡುವ ಉದ್ದೇಶದಿಂದ 100 ಹೈಟೆಕ್ ಸಂಚಾರಿ ಆರೋಗ್ಯ ಕ್ಲಿನಿಕ್ ಗಳನ್ನು 129 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಪ್ರಾರಂಭಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಯೋಜನೆಯಡಿ 26,25,335 ಫಲಾನುಭವಿಗಳಿಗೆ 1718.62 ಕೋಟಿ ರೂಪಾಯಿಗಳ ಮೊತ್ತದ ಸಹಾಯಧನ ವಿತರಿಸಲಾಗಿದೆ.

43) ವನಿತಾ ಸಂಗಾತಿ ಯೋಜನೆಯಡಿ ಒಟ್ಟು 903 ಫಲಾನುಭವಿಗಳಿಗೆ ಬಿ.ಎಂ.ಟಿ.ಸಿ ವತಿಯಿಂದ ರಿಯಾಯಿತಿ ದರದಲ್ಲಿ ಬಸ್ ಪಾಸ್ ವಿತರಿಸಿದ್ದು, 3.79 ಲಕ್ಷ ರೂಪಾಯಿಗಳನ್ನು ಬಿ.ಎಂ.ಟಿ.ಸಿ ಸಂಸ್ಥೆಗೆ ಪಾವತಿಸಿದೆ.

44) ನನ್ನ ಸರ್ಕಾರವು ಹುಬ್ಬಳ್ಳಿ ಹಾಗೂ ದಾವಣಗೆರೆಗಳ ಕಾರ್ಮಿಕರ ರಾಜ್ಯ ವಿಮಾ ಯೋಜನೆ ಆಸ್ಪತ್ರೆಗಳ ಸಾಮರ್ಥ್ಯವನ್ನು 50 ಹಾಸಿಗೆಯಿಂದ 100 ಹಾಸಿಗೆ ಸಾಮರ್ಥ್ಯಕ್ಕೆ ಉನ್ನತೀಕರಿಸಲು ಹಾಗೂ ರಾಜ್ಯದ 19 ಹೊಸ ಪ್ರದೇಶಗಳಲ್ಲಿ ಹೊಸ ಕಾರ್ಮಿಕರ ರಾಜ್ಯ ವಿಮಾ ಚಿಕಿತ್ಸಾಲಯಗಳನ್ನು ಪ್ರಾರಂಭಿಸಲು ಕ್ರಮ ಕೈಗೊಂಡಿದೆ.

45) ನನ್ನ ಸರ್ಕಾರವು ಜನರು ಕೌಶಲ್ಯಯುತರಾಗಿ, ಸ್ವಾವಲಂಬಿಯಾಗಲು ಹಲವು ತರಬೇತಿಗಳನ್ನು ನೀಡಲಾಗುತ್ತಿದೆ. ಮುಖ್ಯಮಂತ್ರಿ ಕೌಶಲ್ಯ ಕರ್ನಾಟಕ ಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ 56131 ಅಭ್ಯರ್ಥಿಗಳಿಗೆ ತರಬೇತಿ ನೀಡಿದ್ದು, ಈ ಪೈಕಿ 24597 ಅಭ್ಯರ್ಥಿಗಳು ಉದ್ಯೋಗವಕಾಶವನ್ನು ಪಡೆದಿರುತ್ತಾರೆ. ಅಮೃತ ಕೌಶಲ್ಯ ತರಬೇತಿ ಕಾರ್ಯಕ್ರಮದಡಿ 75000 ಅಭ್ಯರ್ಥಿಗಳಿಗೆ ಕೌಶಲ್ಯ ತರಬೇತಿ ನೀಡುವ ಗುರಿಯಿದ್ದು, ಇಲ್ಲಿಯವರೆಗೆ 67508 ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗಿದೆ. ಗ್ರಾಮೀಣ ಸ್ವಉದ್ಯೋಗ ತರಬೇತಿ ಕೇಂದ್ರಗಳಲ್ಲಿ ಬಿಪಿಎಲ್ ಕುಟುಂಬದ ಒಟ್ಟು 12,110 ಯುವಕ-ಯುವತಿಯರಿಗೆ ಕೌಶಲ್ಯಾಧಾರಿತ ತರಬೇತಿಯನ್ನು ನೀಡಲಾಗಿದ್ದು, 2221 ತರಬೇತಿ ಪಡೆದ ಫಲಾನುಭವಿಗಳಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಕಲ್ಪಿಸಲಾಗಿದೆ.

46) ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮವು ಆಸಕ್ತ ಉದ್ಯೋಗದಾತರು ಹಾಗೂ ಉದ್ಯೋಗಾಕಾಂಕ್ಷಿಗಳನ್ನು ಒಂದೇ ವೇದಿಕೆಯಡಿ ತರಲು Skill Connect ಪೋರ್ಟಲ್ ಅನ್ನು ರಚಿಸಿದ್ದು, ಇಲ್ಲಿ 9000ಕ್ಕೂ ಅಧಿಕ ಉದ್ಯೋಗ ಮತ್ತು ಶಿಶಿಕ್ಷು ತರಬೇತಿ ಅವಕಾಶಗಳು ಲಭ್ಯವಿದ್ದು, 50ಕ್ಕೂ ಅಧಿಕ ಕೈಗಾರಿಕೆಗಳು ಒಳಗೊಂಡಿರುತ್ತದೆ. ಒಟ್ಟು 14557 ಅಭ್ಯರ್ಥಿಗಳು ಪೋರ್ಟಲ್ ನಲ್ಲಿ ನೊಂದಣಿಯಾಗಿರುತ್ತಾರೆ. ಪ್ರಸಕ್ತ ಸಾಲಿನಲ್ಲಿ ಪಿಎಂ-ಸ್ವ-ನಿಧಿ ಯೋಜನೆಯಡಿ ನವೆಂಬರ್ 2022ರ ಅಂತ್ಯದವರೆಗೆ 68,756 ಬೀದಿ-ಬದಿ ವ್ಯಾಪಾರಿಗಳಿಗೆ 68.75 ಕೋಟಿ ರೂಪಾಯಿಗಳಷ್ಟು ಸಾಲ ಮಂಜೂರಾತಿ ನೀಡಲಾಗಿದ್ದು, 38,623 ಬೀದಿ ಬದಿ ವ್ಯಾಪಾರಿಗಳಿಗೆ ಸದರಿ ಯೋಜನೆಯಡಿ 38.62 ಕೋಟಿ ರೂಪಾಯಿಗಳಷ್ಟು ವಿತರಿಸಲಾಗಿರುತ್ತದೆ.

47) ಸ್ತ್ರೀ-ಸಾಮರ್ಥ್ಯ ಯೋಜನೆಯಡಿ ರಾಜ್ಯದ 50000 ಮಹಿಳಾ ಸ್ವ-ಸಹಾಯ ಸಂಘಗಳಿಗೆ ಉದ್ದಿಮೆಗಳನ್ನು ಪ್ರಾರಂಭಿಸಲು ತಲಾ ಒಂದು ಲಕ್ಷ ರೂಪಾಯಿಗಳ ಬೀಜಧನ ಒದಗಿಸುವುದರೊಂದಿಗೆ ಮಾರುಕಟ್ಟೆ ಕಂಡುಕೊಳ್ಳಲು ನೆರವು ಹಾಗೂ ತರಬೇತಿಯನ್ನು ಸಹ ನೀಡಲಿದೆ. ಇದರಿಂದ 3.90 ಲಕ್ಷ ಮಹಿಳೆಯರಿಗೆ ಅನುಕೂಲವಾಗಲಿದೆ ಹಾಗೂ ಗ್ರಾಮೀಣ ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಈ ಯೋಜನೆ ಮಹತ್ವದ ಕ್ರಮವಾಗಿದೆ.

48) ನನ್ನ ಸರ್ಕಾರವು ಯುವ ಜನತೆಗೆ ಮತ್ತು ಕ್ರೀಡೆಗೂ ಒತ್ತು ನೀಡಿದೆ. ಪ್ರತಿಷ್ಠಿತ ಖೇಲೋ ಇಂಡಿಯಾ ವಿಶ್ವವಿದ್ಯಾಲಯ ಕ್ರೀಡಾ ಕೂಟ-2021ನ್ನು ಜೈನ್ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಬೆಂಗಳೂರಿನಲ್ಲಿ ಯಶಸ್ವಿಯಾಗಿ ಆಯೋಜಿಸಲಾಗಿದೆ. ಗ್ರಾಮೀಣ ಮತ್ತು ಸ್ಥಳೀಯ ಕ್ರೀಡೆಗಳನ್ನು ಪ್ರೋತ್ಸಾಹಿಸಲು ಪ್ರಪ್ರಥಮ ಬಾರಿಗೆ ಗ್ರಾಮೀಣ ಕ್ರೀಡಾಕೂಟಗಳನ್ನು ಆಯೋಜಿಸಲಾಗಿದೆ.

26ನೇ ರಾಷ್ಟ್ರೀಯ ಯುವಜನೋತ್ಸವ ಕಾರ್ಯಕ್ರಮವನ್ನು ದಿನಾಂಕ: 12.01.2023 ರಿಂದ 16.01.2023ರವರೆಗೆ ಹುಬ್ಬಳ್ಳಿ-ಧಾರವಾಡದಲ್ಲಿ ಯಶಸ್ವಿಯಾಗಿ ಆಯೋಜಿಸಲಾಯಿತು.

49) ಸ್ವಾಮಿ ವಿವೇಕಾನಂದ ಯುವಶಕ್ತಿ ಯೋಜನೆಯಡಿ ಸ್ವಾಮಿ ವಿವೇಕಾನಂದ ಜಂಟಿ ಬಾಧ್ಯತಾ ಗುಂಪುಗಳನ್ನು ರಚಿಸಿ, ಯುವಕರಿಗೆ ಸ್ವ-ಉದ್ಯೋಗ ಹಾಗೂ ಆರ್ಥಿಕ ಚಟುವಟಿಕೆಯನ್ನು ಕೈಗೊಳ್ಳಲಾಗಿದೆ. ಅಮೃತ ಸಮುದಾಯ ಅಭಿವೃದ್ಧಿ ಯೋಜನೆಯಡಿ ದತ್ತು ಪಡೆದ ಗ್ರಾಮಗಳಲ್ಲಿ ಅರಿವು ಕಾರ್ಯಕ್ರಮಗಳಿಂದ 3.5 ಲಕ್ಷಕ್ಕೂ ಹೆಚ್ಚು ಜನರಿಗೆ ಅನುಕೂಲವಾಗಿದೆ. ಅಮೃತ ಕ್ರೀಡಾ ದತ್ತು ಯೋಜನೆಯಡಿ 75 ಪ್ರತಿಭಾವಂತ ಕ್ರೀಡಾಪಟುಗಳನ್ನು ಗುರುತಿಸಿ, 2024ರ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಪಾಲ್ಗೊಳ್ಳಲು ನೆರವಾಗುವಂತೆ ತರಬೇತಿ ನೀಡಲಾಗುತ್ತಿದೆ. ಸನ್ಮಾನ್ಯ ಪ್ರಧಾನಮಂತ್ರಿಯವರ "ಹರ್ ಘರ್ ಯೋಗ" ಎಂಬ ಕನಸನ್ನು ಈಡೇರಿಸಲು ಹಾಗೂ ಕರ್ನಾಟಕವನ್ನು ಭಾರತದ ಮೊದಲ ಯೋಗ ಸಾಕ್ಷರತಾ ರಾಜ್ಯವನ್ನಾಗಿಸಲು ದಿನಾಂಕ: 15-01-2023 ರಲ್ಲಿ ನಡೆದ ಯೋಗಥಾನ್ ನಲ್ಲಿ ಒಟ್ಟು 4,05,255 ಜನರು ಭಾಗವಹಿಸುವುದರ ಮೂಲಕ "ಗಿನ್ನಿಸ್ ವಿಶ್ವ ದಾಖಲೆ" ರೂಪಿಸುವ ಪ್ರಯತ್ನ ಸಫಲವಾಗಿದೆ.

50) ರಾಜ್ಯದಲ್ಲಿ ಶಿಕ್ಷಣ, ಆರೋಗ್ಯ ಮತ್ತು ಅಪೌಷ್ಟಿಕತೆಯ ವಿಷಯಗಳಲ್ಲಿ ರಾಜ್ಯದ ಸರಾಸರಿಗಿಂತ ಕಡಿಮೆ ಸೂಚ್ಯಂಕ ಹೊಂದಿರುವ ತಾಲ್ಲೂಕುಗಳಲ್ಲಿ ಆಯಾ ವಲಯಗಳಲ್ಲಿ ಸುಧಾರಣೆಗಳನ್ನು ತರಲು ಅಭಿವೃದ್ಧಿ ಆಕಾಂಕ್ಷಿ ತಾಲ್ಲೂಕುಗಳೆಂದು ಗುರುತಿಸಿ ಆದ್ಯತೆಯ ಮೇರೆಗೆ ಸುಧಾರಣಾ

ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಇದಕ್ಕಾಗಿ ವಿವಿಧ ಇಲಾಖೆಗಳ ಮೂಲಕ 3000 ಕೋಟಿ ರೂಪಾಯಿಗಳನ್ನು ಒದಗಿಸಲಾಗಿದೆ.

51) 2020-21ರ ಎಸ್.ಡಿ.ಜಿ. ಇಂಡಿಯಾ ಇಂಡೆಕ್ಸ್ ವರದಿ ಪ್ರಕಾರ ಸುಸ್ಥಿರ ಅಭಿವೃದ್ಧಿ ಗುರಿ ಸಾಧನೆಯಲ್ಲಿ ರಾಜ್ಯದ ಶ್ರೇಯಾಂಕ 4ನೇ ಸ್ಥಾನಕ್ಕೆ ಏರಿಕೆಯಾಗಿರುತ್ತದೆ. 2022-23ನೇ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಅನುದಾನವನ್ನು ದ್ವಿಗುಣಗೊಳಿಸಿ, 3000 ಕೋಟಿ ರೂಪಾಯಿಗಳು ಮತ್ತು ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ 600 ಕೋಟಿ ರೂಪಾಯಿಗಳನ್ನು ಆಯವ್ಯಯದಲ್ಲಿ ನಿಗದಿಪಡಿಸಲಾಗಿದೆ.

52) 6ನೇ ಆರ್ಥಿಕ ಗಣತಿಯ ಪ್ರಕಾರ ರಾಜ್ಯದಲ್ಲಿ ಒಟ್ಟು 28.81 ಲಕ್ಷ ಉದ್ದಿಮೆಗಳಿದ್ದು, 7ನೇ ಆರ್ಥಿಕ ಗಣತಿಯಲ್ಲಿ ಇವುಗಳ ಪ್ರಮಾಣವು 45.02 ಲಕ್ಷಗಳಷ್ಟು ಹೆಚ್ಚಾಗಿರುತ್ತದೆ. 6ನೇ ಆರ್ಥಿಕ ಗಣತಿಗೆ ಹೋಲಿಸಿದಾಗ ಶೇಕಡ 56.88 ರಷ್ಟು ಉದ್ದಿಮೆಗಳನ್ನು ಅಧಿಕವಾಗಿ ಗುರುತಿಸಲಾಗಿದೆ. ರಾಜ್ಯಾದ್ಯಂತ ಇರುವ ಸಣ್ಣ, ಅತೀ ಸಣ್ಣ, ಮಧ್ಯಮ ಹಾಗೂ ದೊಡ್ಡ ಹಿಡುವಳಿದಾರರನ್ನು ಗುರುತಿಸಲು ದಿನಾಂಕ:01-10-2022 ರಿಂದ 11ನೇ ಕೃಷಿ ಗಣತಿಯ ಕಾರ್ಯವನ್ನು ಪ್ರಾರಂಭಿಸಲಾಗಿದೆ.

53) ನನ್ನ ಸರ್ಕಾರವು ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಪಡಿತರ ಫಲಾನುಭವಿಗಳಿಗೆ ಪ್ರತಿ ತಿಂಗಳು ವಿತರಿಸಲಾಗುವ ಆಹಾರ ಧಾನ್ಯದೊಂದಿಗೆ, ಪ್ರಧಾನಮಂತ್ರಿ ಗರೀಬ್ ಕಲ್ಯಾಣ ಅನ್ನ ಯೋಜನೆಯಡಿ ಹೆಚ್ಚುವರಿಯಾಗಿ ಪ್ರತಿ ತಿಂಗಳು 5 ಕೆ.ಜಿ. ಅಕ್ಕಿಯನ್ನು 2022ರ ಏಪ್ರಿಲ್ ನಿಂದ ಡಿಸೆಂಬರ್‌ವರೆಗೆ

ಉಚಿತವಾಗಿ ವಿತರಿಸಿದೆ. ಈ ಉದ್ದೇಶಕ್ಕಾಗಿ 866 ಕೋಟಿ ರೂಪಾಯಿಗಳನ್ನು ಬಳಸಿಕೊಳ್ಳಲಾಗಿದೆ.

54) 2022-23ನೇ ಸಾಲಿನಲ್ಲಿ ಸಾರ್ವಜನಿಕ ವಿತರಣಾ ಪದ್ಧತಿಯಡಿ 14 ಜಿಲ್ಲೆಗಳಲ್ಲಿನ 1.53 ಕೋಟಿ ಫಲಾನುಭವಿಗಳಿಗೆ ಸಾರವರ್ಧಿತ ಅಕ್ಕಿಯನ್ನು ವಿತರಿಸಲಾಗಿದೆ. 2021-22ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ 7.28 ಲಕ್ಷ ಮೆಟ್ರಿಕ್ ಟನ್ ಆಹಾರ ಧಾನ್ಯವನ್ನು 3.64 ಲಕ್ಷ ರೈತರಿಂದ ಸಂಗ್ರಹಿಸಲಾಗಿದೆ. ಈ ಉದ್ದೇಶಕ್ಕಾಗಿ ಅಂದಾಜು 2077 ಕೋಟಿ ರೂಪಾಯಿಗಳನ್ನು ಉಪಯೋಗಿಸಿಕೊಳ್ಳಲಾಗಿದೆ. ಸಂಗ್ರಹಿಸಲಾದ ಭತ್ತದ ಪರಿವರ್ತಿತ ಅಕ್ಕಿ, ರಾಗಿ ಮತ್ತು ಬಿಳಿ ಜೋಳವನ್ನು ಸಾರ್ವಜನಿಕ ವಿತರಣಾ ಪದ್ಧತಿಯಡಿ ವಿತರಿಸಲಾಗಿದೆ.

55) ರಾಜ್ಯದ ಪ್ರಜೆಗಳಿಗೆ ರಕ್ಷಣೆ ನೀಡುವುದು ಯಾವುದೇ ಸರ್ಕಾರದ ಪರಮ ಗುರಿಯಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ನನ್ನ ಸರ್ಕಾರವು ಪೊಲೀಸ್ ಇಲಾಖೆಯನ್ನು ಬಲಪಡಿಸಲು ಕಳೆದ 3 ವರ್ಷಗಳಲ್ಲಿ 16,811 ಹುದ್ದೆಗಳನ್ನು ಭರ್ತಿ ಮಾಡಿದೆ. ಪೊಲೀಸ್ ಗೃಹ ಯೋಜನೆಯಡಿ 10 ಸಾವಿರ ವಸತಿ ಗೃಹಗಳನ್ನು ನಿರ್ಮಿಸಲು ಉದ್ದೇಶಿಸಿದ್ದು, ಅನುದಾನ ಒದಗಿಸಲಾಗಿದೆ. ಅಪರಾಧ ಪ್ರಕರಣಗಳಲ್ಲಿ ತನಿಖೆಯನ್ನು ಪರಿಣಾಮಕಾರಿಯಾಗಿ ಮತ್ತು ತ್ವರಿತಗೊಳಿಸಲು ಅನುಕೂಲವಾಗುವಂತೆ 8 ವಿಧಿ ವಿಜ್ಞಾನ ಪ್ರಯೋಗಾಲಯಗಳನ್ನು ಸ್ಥಾಪಿಸಲಾಗಿದೆ.

56) ಕಾರಾಗೃಹಗಳಲ್ಲಿ ಬಂಧಿಗಳ ದಟ್ಟಣೆಯನ್ನು ಕಡಿಮೆ ಮಾಡಲು 410 ಕೋಟಿ ರೂಪಾಯಿಗಳ ಅನುದಾನದಲ್ಲಿ 4 ಹೊಸ ಬಂಧೀಖಾನೆಗಳನ್ನು ನಿರ್ಮಿಸಲಾಗುತ್ತಿದೆ. ಕೌಶಲ್ಯಾಭಿವೃದ್ಧಿ ಇಲಾಖೆಯ ಸಹಯೋಗದೊಂದಿಗೆ ವಿವಿಧ ಕೌಶಲ್ಯ

ಜಾರಿಗೆ ತರಲಾಗಿದೆ. ಬೆಂಗಳೂರು ನಗರವನ್ನು ಮಾಲಿನ್ಯ ಮುಕ್ತ ಮಾಡುವ ನಿಟ್ಟಿನಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಎಲೆಕ್ಟ್ರಿಕ್ ಬಸ್‌ಗಳನ್ನು ಹಂತ ಹಂತವಾಗಿ ಸೇರ್ಪಡೆ ಮಾಡಲು ಆರಂಭಿಸಿರುತ್ತದೆ. ಬಿಡದಿಯಲ್ಲಿ ನೂತನ ಎಲೆಕ್ಟ್ರಿಕ್ ಬಸ್ ಘಟಕವನ್ನು ಪ್ರಾಯೋಗಿಕವಾಗಿ ಕಾರ್ಯಾರಂಭ ಮಾಡಲಾಗಿರುತ್ತದೆ.

61) ರಾಜ್ಯ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ರಾಜ್ಯ ಸರ್ಕಾರವು ನಗದು ರಹಿತ ವೈದ್ಯಕೀಯ ಸೌಲಭ್ಯ ಕಲ್ಪಿಸುವ ನೂತನ ಯೋಜನೆಯಾದ "ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ"ಯನ್ನು ರೂಪಿಸಿದ್ದು, ಈ ಯೋಜನೆಯನ್ನು ಕಾರ್ಯಗತಗೊಳಿಸಲು ಕ್ರಮವಹಿಸಲಾಗುತ್ತಿದೆ ಎಂದು ತಿಳಿಸಲು ಹರ್ಷಿಸುತ್ತೇನೆ.

62) ನನ್ನ ಸರ್ಕಾರವು ಅಧಿಕಾರಿ / ನೌಕರರ ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಹಲವು ಕ್ರಮಗಳನ್ನು ಕೈಗೊಳ್ಳುತ್ತಿದೆ. ಈ ನಿಟ್ಟಿನಲ್ಲಿ ನಾವು CEGIS (ಸೆಂಟರ್ ಫಾರ್ ಎಫೆಕ್ಟಿವ್ ಗವರ್ನೆನ್ಸ್ ಆಫ್ ಇಂಡಿಯನ್ ಸ್ಟೇಟ್ಸ್) ನೊಂದಿಗೆ MoU ಗೆ ಸಹಿ ಹಾಕಿದ್ದೇವೆ.

63) ನನ್ನ ಸರ್ಕಾರವು ಆಧುನಿಕ ತಂತ್ರಜ್ಞಾನವನ್ನು ಅಳವಡಿಸಿಕೊಂಡು ಪ್ರಜೆಗಳಿಗೆ ಅನೇಕ ಸೌಲಭ್ಯಗಳನ್ನು ಒದಗಿಸುತ್ತಿದೆ. ಕರ್ನಾಟಕದ ಜನಸಂಖ್ಯೆಯ 90.02% ಕುಟುಂಬ ಯೋಜನೆಗೆ ಒಳಪಟ್ಟಿದೆ, ಕುಟುಂಬ ಯೋಜನೆಯನ್ನು ಭಾರತ ಸರ್ಕಾರ – 2022ರ ರಾಷ್ಟ್ರೀಯ ಇ-ಆಡಳಿತ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ರಾಜ್ಯದ ಈ ಫ್ರೂಟ್ಸ್ ತಂತ್ರಾಂಶದ ಮಾದರಿಯನ್ನು Agri Stack ಕಾರ್ಯಕ್ರಮವಾಗಿ ಒಕ್ಕೂಟದ ರೀತಿಯಲ್ಲಿ ದೇಶದಾದ್ಯಂತ ಅನುಷ್ಠಾನಗೊಳಿಸಲು

ತೀರ್ಮಾನಿಸಲಾಗಿದೆ. ಕರ್ನಾಟಕ ಮುಕ್ತ ದತ್ತಾಂಶ ಉಪಕ್ರಮವು ಡಿಜಿಟಲ್ ಇಂಡಿಯಾ ಪ್ರಶಸ್ತಿ 2022ರ ಸಾಮಾಜಿಕ ಆರ್ಥಿಕ ಅಭಿವೃದ್ಧಿಯಲ್ಲಿ ದತ್ತಾಂಶ ಹಂಚಿಕೆ ಮತ್ತು ಬಳಕೆಯಲ್ಲಿ ಪ್ರಶಸ್ತಿಯನ್ನು ಪಡೆದುಕೊಂಡಿದೆ. ಒಟ್ಟು 323 ಯೋಜನೆಗಳನ್ನು ಡಿ.ಬಿ.ಟಿ. ವೇದಿಕೆಗೆ ಆನ್ ಬೋರ್ಡ್ ಮಾಡಲಾಗಿದೆ. 2022-23ರ ಆರ್ಥಿಕ ವರ್ಷದಲ್ಲಿ ಸುಮಾರು 6,226.75 ಸಾವಿರ ಕೋಟಿ ರೂಪಾಯಿಗಳನ್ನು ನೇರವಾಗಿ ಸುಮಾರು 139.44 ಲಕ್ಷ ಫಲಾನುಭವಿಗಳಿಗೆ ವರ್ಗಾಯಿಸಲಾಗಿದೆ. ದತ್ತಾಂಶ ಸಂರಕ್ಷಣೆ ಮತ್ತು ವ್ಯವಹಾರ ನಿರಂತರತೆಗಾಗಿ ವಿಪತ್ತು ಚೇತರಿಕಾ ಕೇಂದ್ರವನ್ನು ಆಗಸ್ಟ್ ನಲ್ಲಿ ಮತ್ತು ಭದ್ರತಾ ಕಾರ್ಯಾಚರಣಾ ಕೇಂದ್ರವನ್ನು ಜುಲೈ 2022 ರಲ್ಲಿ ಸ್ಥಾಪಿಸಲಾಗಿದೆ.

64) ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ರಂಗದಲ್ಲಿ ಕರ್ನಾಟಕವು ಭಾರತದ ಮುಂಚೂಣಿ ರಾಜ್ಯವಾಗಿದ್ದು, ಇದರ ಪ್ರೋತ್ಸಾಹಕ್ಕೆ ಹಲವಾರು ಕ್ರಮಗಳನ್ನು ನನ್ನ ಸರ್ಕಾರವು ಕೈಗೊಂಡಿದೆ. ಆರ್&ಡಿ ಮತ್ತು ಇನ್ನೋವೇಶನ್ ನೀತಿಯನ್ನು ಘೋಷಿಸಿದ ಮೊದಲ ರಾಜ್ಯ ಕರ್ನಾಟಕವಾಗಿದೆ. ನೀತಿ ಆಯೋಗದ ಭಾರತ ಇನ್ನೋವೇಶನ್ ಇಂಡೆಕ್ಸ್‌ನಲ್ಲಿ ಸತತ 3 ವರ್ಷಗಳಿಂದ ಕರ್ನಾಟಕ ಪ್ರಥಮ ಸ್ಥಾನದಲ್ಲಿದೆ. ಜಾಗತಿಕ ಮಟ್ಟದ ಬೆಂಗಳೂರು ಟೆಕ್ ಸಮ್ಮಿಟ್-2022ರ ರಜತ ಮಹೋತ್ಸವ ಸಮಾವೇಶವನ್ನು ಬೆಂಗಳೂರಿನಲ್ಲಿ ಆಯೋಜಿಸಲಾಗಿತ್ತು.

65) ಅತ್ಯಾಚಾರ ಪ್ರಕರಣಗಳು ಮತ್ತು POCSO ಕಾಯ್ದೆ ಪ್ರಕರಣಗಳ ವಿಚಾರಣೆಗಾಗಿ 31 ಶೀಘ್ರಗತಿ ವಿಶೇಷ ನ್ಯಾಯಾಲಯಗಳನ್ನು ಸ್ಥಾಪಿಸಲು ಮಂಜೂರಾತಿ ನೀಡಿದೆ.

66) ನನ್ನ ಸರ್ಕಾರವು ಕನ್ನಡ ನಾಡು-ನುಡಿ, ಸಂಸ್ಕೃತಿ ರಕ್ಷಣೆ ಮತ್ತು ಬೆಳವಣಿಗೆಗೆ ಹಲವು ಕಾರ್ಯಕ್ರಮಗಳನ್ನು ಕೈಗೊಂಡಿದೆ. 67ನೇ ಕನ್ನಡ ರಾಜ್ಯೋತ್ಸವ ಪ್ರಯುಕ್ತ 'ಕೋಟಿ ಕಂಠ ಗಾಯನ ಕಾರ್ಯಕ್ರಮದಲ್ಲಿ ಜಗತ್ತಿನ 51 ರಾಷ್ಟ್ರಗಳು, ದೇಶದ 28 ರಾಜ್ಯಗಳು, 21 ಸಾವಿರಕ್ಕೂ ಹೆಚ್ಚು ಸ್ಥಳಗಳಲ್ಲಿ ಏಕಕಾಲಕ್ಕೆ 1.37 ಕೋಟಿ ಕಂಠಗಳಲ್ಲಿ 6 ಗೀತೆಗಳನ್ನು ಹಾಡಲಾಯಿತು. ರಾಜ್ಯದ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ ಕರ್ನಾಟಕ ರತ್ನ ಪ್ರಶಸ್ತಿಯನ್ನು ದಿವಂಗತ ಪುನೀತ್ ರಾಜ್ ಕುಮಾರ್ ರವರಿಗೆ ಮರಣೋತ್ತರವಾಗಿ ಪ್ರದಾನ ಮಾಡಲಾಯಿತು. ನಶಿಸಿ ಹೋಗುತ್ತಿರುವ ತಳ ಸಮುದಾಯಗಳಲ್ಲಿರುವ ವಿಶಿಷ್ಟ ಕಲೆಗಳನ್ನು ಉಳಿಸಿ ಮುನ್ನೆಲೆಗೆ ತರಲು "ಮೂಲ ಸಂಸ್ಕೃತಿ - ಕನ್ನಡ ಸಂಸ್ಕೃತಿ' ಹೆಸರಿನಲ್ಲಿ ರಾಜ್ಯ ಮಟ್ಟದ ಬೃಹತ್ ಉತ್ಸವವನ್ನು ಆಯೋಜಿಸಲಾಗಿದೆ. ಕರ್ನಾಟಕ ಲಂಬಾಣಿ ಸಾಹಿತ್ಯ ಅಕಾಡೆಮಿ ಆರಂಭಿಸಲಾಗಿದೆ. ಯಕ್ಷಗಾನ ಕಲೆಯನ್ನು ಉಳಿಸಿ ಬೆಳೆಸಲು ಯಕ್ಷ ರಂಗಾಯಣವನ್ನು ಸ್ಥಾಪಿಸಲಾಗಿದೆ.

67) ನನ್ನ ಸರ್ಕಾರವು ಕನ್ನಡ ಮತ್ತು ಕರ್ನಾಟಕದ ಇತರೆ ಪ್ರಾದೇಶಿಕ ಭಾಷೆಯ ಚಲನ ಚಿತ್ರಗಳಿಗೆ ನೀಡುತ್ತಿರುವ ಸಹಾಯಧನವನ್ನು 125 ರಿಂದ 200 ಚಲನಚಿತ್ರಗಳಿಗೆ ಹೆಚ್ಚಿಸಲಾಗಿದೆ. ನಾದದ ನವನೀತ ಡಾ: ಪಂಡಿತ್ ವೆಂಕಟೇಶ್ ಕುಮಾರರವರ ಕುರಿತು ಇಲಾಖೆಯು ನಿರ್ಮಿಸಿರುವ ಸಾಕ್ಷ್ಯ ಚಿತ್ರವು "ರಜತ ಕಮಲ" ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಗಳಿಸಿದೆ.

68) ರಾಜ್ಯ ಪುರಾತತ್ವ ಇಲಾಖೆಯ Adopt a Monument ಯೋಜನೆಯಡಿ ರಾಜ್ಯದ ಪ್ರಮುಖ 28 ಸ್ಮಾರಕಗಳ ನಿರ್ವಹಣೆ ಹಾಗೂ ಅಭಿವೃದ್ಧಿಗಾಗಿ ದತ್ತು ನೀಡಲು ಮಾರ್ಗ ಸೂಚಿಗಳು ಹಾಗೂ ವೆಬ್ ಸೈಟ್ ಲೋಕಾರ್ಪಣೆ ಗೊಳಿಸಲಾಗಿದೆ. ಇಂಡಿಯಾ

ಟುಡೇ ಸಂಸ್ಥೆಯು ಆಯೋಜಿಸಿದ 3ನೇ ಆವೃತ್ತಿಯ India Today Tourism Awards-2021 ರ ಕಾರ್ಯಕ್ರಮದಲ್ಲಿ ಮೈಸೂರು ದಸರಾ ಉತ್ಸವ "Best Festival"; ನಂದಿಬೆಟ್ಟ "Best Mountain Destination" ಎಂಬ ಪ್ರಶಸ್ತಿ ಲಭಿಸಿದೆ. ಹೊಯ್ಸಳರು ನಿರ್ಮಿಸಿರುವ ಬೇಲೂರು, ಹಳೇಬೀಡು ಮತ್ತು ಸೋಮನಾಥಪುರ ಸ್ಮಾರಕಗಳು ವಿಶ್ವಪರಂಪರೆಯ ತಾತ್ಕಾಲಿಕ ಪಟ್ಟಿಯಲ್ಲಿ ಆಯ್ಕೆಗೊಂಡಿದ್ದು, ಈ ತಾಣಗಳನ್ನು ಅಂತಿಮ ಪಟ್ಟಿಗೆ ಸೇರ್ಪಡೆಗೊಳಿಸುವ ಸಲುವಾಗಿ ಡೋಸಿಯರ್ ಅನ್ನು ಸಿದ್ಧಪಡಿಸಿ ಯುನೆಸ್ಕೋ ಸಮಿತಿಯ ಪರಿಶೀಲನೆಗೆ ಸಲ್ಲಿಸಲಾಗಿದೆ.

69) ರಾಜ್ಯದ ರಾಜಸ್ವ ಸಂಗ್ರಹಣೆಯು ಜನವರಿ 2023 ಕ್ಕೆ ಶೇಕಡಾ 91 ರಷ್ಟು ಸಾಧಿಸಲಾಗಿದೆ. ರಾಜ್ಯದ ಸ್ವಂತ ತೆರಿಗೆ ರಾಜಸ್ವವು ಕಳೆದ ಸಾಲಿಗೆ ಹೋಲಿಸಿದರೆ ಜನವರಿ 2023ಕ್ಕೆ ಶೇಕಡಾ 21ರಷ್ಟು ಹೆಚ್ಚಳವಾಗಿದೆ. ಜನವರಿ 2023ಕ್ಕೆ ಬಂಡವಾಳ ವೆಚ್ಚವು 33,991 ಕೋಟಿ ರೂಪಾಯಿಗಳಾಗಿದೆ. ಕಳೆದ ಸಾಲಿನಲ್ಲಿ ಇದು 26,915 ಕೋಟಿ ರೂಪಾಯಿಗಳಾಗಿತ್ತು. ಜನವರಿ 2023ರ ಹೊತ್ತಿಗೆ ಆಯವ್ಯಯ ಅಂದಾಜಿನ ಶೇಕಡಾ 75 ರಷ್ಟನ್ನು ನನ್ನ ಸರ್ಕಾರವು ವೆಚ್ಚ ಮಾಡಿದೆ. ಇದು ಕಳೆದ ಕೆಲ ವರ್ಷಗಳಿಗೆ ಹೋಲಿಸಿದ್ದಲ್ಲಿ, ಹೆಚ್ಚಾಗಿರುವುದು ಕಂಡು ಬರುತ್ತದೆ.

70) 1475 ತಾಂಡಾ, ಗೊಲ್ಲರಹಟ್ಟಿ, ಕುರುಬರಹಟ್ಟಿ ಮತ್ತು ಇತರ ದಾಖಲೆ ರಹಿತ ಜನ ವಸತಿ ಪ್ರದೇಶಗಳನ್ನು ಕಂದಾಯ ಗ್ರಾಮಗಳೆಂದು ಘೋಷಿಸಿದ್ದು, ಇತ್ತೀಚಿಗೆ ಕಲಬುರಗಿ ಜಿಲ್ಲೆಯಲ್ಲಿ ಆಯೋಜಿಸಿದ ಸಮಾರಂಭದಲ್ಲಿ ಮಾನ್ಯ ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿಯವರ ಸಮ್ಮುಖದಲ್ಲಿ 52,000 ಪತ್ರಗಳನ್ನು ಫಲಾನುಭವಿಗಳಿಗೆ ವಿತರಿಸಿ, ವಿಶ್ವ ದಾಖಲೆಯನ್ನು

ನಿರ್ಮಿಸಲಾಗಿದೆ ಎಂದು ತಿಳಿಸಲು ನನ್ನ ಸರ್ಕಾರವು ಹರ್ಷಿಸುತ್ತದೆ.

71) ನನ್ನ ಸರ್ಕಾರವು ಜನಸಾಮಾನ್ಯರಿಗೆ ಅನುಕೂಲವಾಗಲು ಹಲವಾರು ಕ್ರಮಗಳನ್ನು ಕಂದಾಯ ಇಲಾಖಾ ವ್ಯಾಪ್ತಿಯಲ್ಲಿ ಕೈಗೊಂಡಿದೆ. ಯು.ಪಿ.ಒ.ಆರ್ ಯೋಜನೆಯಡಿ ಬೆಂಗಳೂರು ನಗರದಲ್ಲಿ 1.63 ಲಕ್ಷ ಮತ್ತು ಬಾಗಲಕೋಟೆ ನಗರದಲ್ಲಿ 20 ಸಾವಿರ ಕರಡು ಪಿ.ಆರ್ ಕಾರ್ಡ್‌ಗಳನ್ನು ಸೃಜಿಸಲಾಗಿದೆ.

72) ಕರ್ನಾಟಕ ಸರ್ಕಾರವು ಬಡತನ ರೇಖೆಗಿಂತ ಕೆಳಗಿರುವ ವರ್ಗದ ವ್ಯಕ್ತಿಗಳಿಗೆ ಆರ್ಥಿಕ ಭದ್ರತೆ ನೀಡಿ ಸಮಾಜದ ಮುಖ್ಯವಾಹಿನಿಗೆ ತರುವಲ್ಲಿ ವಿವಿಧ ಸಾಮಾಜಿಕ ಭದ್ರತೆ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದು, ಒಟ್ಟು 75.76 ಲಕ್ಷ ಫಲಾನುಭವಿಗಳಿಗೆ ಮಾಸಿಕ ಪಿಂಚಣಿ ಸೌಲಭ್ಯ ನೀಡಲಾಗುತ್ತಿದೆ. ಇದಕ್ಕಾಗಿ 9483 ಕೋಟಿ ರೂಪಾಯಿಗಳ ಅನುದಾನ ಮೀಸಲಿಡಲಾಗಿದೆ. ವಿವಿಧ ಮಾಸಿಕ ಪಿಂಚಣಿ ಯೋಜನೆಗಳ ಮೊತ್ತವನ್ನು ಪರಿಷ್ಕರಿಸಿ ಜಾರಿಗೊಳಿಸಿದ್ದು, ಇದಕ್ಕಾಗಿ ವಾರ್ಷಿಕ 1534 ಕೋಟಿ ರೂಪಾಯಿಗಳ ಹೆಚ್ಚುವರಿ ಅನುದಾನ ಒದಗಿಸಿದೆ.

73) ಮನೆ ಬಾಗಿಲಿಗೆ ಮಾಸಾಶನ ಅಭಿಯಾನದಡಿ ಸ್ವಯಂ ಪ್ರೇರಿತವಾಗಿ ಅರ್ಹ ಫಲಾನುಭವಿಗಳನ್ನು ಗುರುತಿಸಿ 65 ಸಾವಿರ ಫಲಾನುಭವಿಗಳಿಗೆ ಸ್ವಯಂ ಪ್ರೇರಿತವಾಗಿ ಪಿಂಚಣಿ ಮಂಜೂರು ಮಾಡಲಾಗಿದೆ. 3.84 ಲಕ್ಷ ಮೃತ / ವಲಸೆ/ ಅನರ್ಹ ಫಲಾನುಭವಿಗಳನ್ನು ಗುರುತಿಸಿ ಪಿಂಚಣಿ ಸ್ಥಗಿತಗೊಳಿಸಿ ವಾರ್ಷಿಕ 461 ಕೋಟಿ ರೂಪಾಯಿಗಳ ಉಳಿತಾಯ ಮಾಡಲಾಗಿದೆ.

74) ನನ್ನ ಸರ್ಕಾರವು 2022-23ನೇ ಸಾಲಿನಲ್ಲಿ ಉಂಟಾದ ಅತಿವೃಷ್ಟಿ ಹಾಗೂ ಪ್ರವಾಹದಿಂದ ಬೆಳೆ ನಷ್ಟ ಅನುಭವಿಸಿದ 14.63 ಲಕ್ಷ ರೈತರಿಗೆ 2031 ಕೋಟಿ ರೂಪಾಯಿಗಳ ಪರಿಹಾರ ವಿತರಿಸಿದೆ. ಈ ಪರಿಹಾರ ಮೊತ್ತವು ಎನ್.ಡಿ.ಆರ್.ಎಫ್ / ಎಸ್.ಡಿ.ಆರ್.ಎಫ್. ನಿಗದಿಪಡಿಸಿದ ಪರಿಹಾರದೊಂದಿಗೆ ಹೆಚ್ಚುವರಿ ಪರಿಹಾರವನ್ನು ರಾಜ್ಯ ಸರ್ಕಾರದ ಬೊಕ್ಕಸದಿಂದ ಒದಗಿಸಲಾಗಿದೆ.

75) ಸರ್ಕಾರವು ತಸ್ತೀಕ್ ಭತ್ಯೆಯನ್ನು 48 ಸಾವಿರದಿಂದ 60 ಸಾವಿರ ರೂಪಾಯಿಗಳಿಗೆ ಹೆಚ್ಚಿಸಿದೆ. ಆನ್ಲೈನ್ ಮುಖಾಂತರ ಭಕ್ತಾಧಿಗಳಿಗೆ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಐ.ಟಿ.ಎಂ.ಎಸ್ (Intigrated Temple Management System) ತಂತ್ರಾಂಶವನ್ನು ರೂಪಿಸಿದೆ. ಕರ್ನಾಟಕ ರಾಜ್ಯದಿಂದ ಕಾಶಿಯಾತ್ರೆ ಕೈಗೊಳ್ಳಲು 30 ಸಾವಿರ ಯಾತ್ರಾರ್ಥಿಗಳಿಗೆ ತಲಾ 5,000 ರೂಪಾಯಿಗಳ ಸಹಾಯಧನ ನೀಡಲಾಗುತ್ತಿದೆ. ಪುಣ್ಯ ಕ್ಷೇತ್ರ ಪ್ರವಾಸ ಕೈಗೊಳ್ಳಲು ರೈಲ್ವೆ ಇಲಾಖೆಯ ಸಹಯೋಗದೊಂದಿಗೆ ಭಾರತ್ ಗೌರವ ಯೋಜನೆಯನ್ನು ಕೈಗೊಂಡಿದೆ.

76) ಲೋಕೋಪಯೋಗಿ ಇಲಾಖೆಯ ವಿವಿಧ ಯೋಜನೆಗಳು ಮತ್ತು ಕಾರ್ಯಕ್ರಮಗಳ ಮೂಲಕ ರಾಜ್ಯ ಹೆದ್ದಾರಿಗಳು ಮತ್ತು ಜಿಲ್ಲಾ ರಸ್ತೆಗಳ ಅಭಿವೃದ್ಧಿಯನ್ನು ಕೈಗೊಳ್ಳುವ ಮೂಲಕ ಸುರಕ್ಷಿತ ಮತ್ತು ವಾಹನಗಳ ಸುಲಭ ಸಂಚಾರವನ್ನು ಒದಗಿಸಲು ಉತ್ತಮ ರಸ್ತೆ ಜಾಲವನ್ನು ಅಭಿವೃದ್ಧಿ ಪಡಿಸಲು ನನ್ನ ಸರ್ಕಾರ ಬದ್ಧವಾಗಿದೆ. ಇದರನ್ವಯ, ರಸ್ತೆ ಮತ್ತು ಸೇತುವೆಗಳ ಯೋಜನೆಯಡಿ ಹೊಸ ಕಾಮಗಾರಿಗಳಿಗೆ 5140 ಕೋಟಿ ರೂಪಾಯಿಗಳನ್ನು ಮಂಜೂರು ಮಾಡಲಾಗಿದೆ. 2275 ಕಿಲೋ ಮೀಟರ್ ಉದ್ದದ ರಾಜ್ಯ ಹೆದ್ದಾರಿ ರಸ್ತೆಗಳ ಸುಧಾರಣೆಯನ್ನು 3500 ಕೋಟಿ ರೂಪಾಯಿ ವೆಚ್ಚದಲ್ಲಿ, ರಸ್ತೆ ಸುರಕ್ಷತಾ

ಕಾಮಗಾರಿಗಳನ್ನು 165 ಕೋಟಿ ರೂಪಾಯಿ ವೆಚ್ಚದಲ್ಲಿ, 1008 ಕಿಲೋ ಮೀಟರ್ ಉದ್ದದ ರಾಜ್ಯ ಹೆದ್ದಾರಿ ರಸ್ತೆಗಳ ನವೀಕರಣವನ್ನು 440 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಕರಾವಳಿ ಮತ್ತು ಮಲೆನಾಡು ಪ್ರದೇಶಗಳ ಜನರಿಗೆ ಸಂಪರ್ಕ ಕಲ್ಪಿಸಲು ಗ್ರಾಮಬಂಧು ಸೇತು ಯೋಜನೆಯಡಿ 1411 ಕಾಲು ಸಂಕಗಳ ನಿರ್ಮಾಣವನ್ನು ಕೈಗೊಳ್ಳಲಾಗಿದೆ.

77) ನನ್ನ ಸರ್ಕಾರವು ನೀರಾವರಿ ಕ್ಷೇತ್ರದಲ್ಲಿ ಹಲವಾರು ಯೋಜನೆಗಳನ್ನು ಕೈಗೊಂಡಿದೆ. ಇದರ ಭಾಗವಾಗಿ ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ ಹಾಗೂ ತುಮಕೂರು ಜಿಲ್ಲೆಯ 2.25 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ಸೂಕ್ಷ್ಮ ನೀರಾವರಿ ಒದಗಿಸುವುದು ಮತ್ತು 367 ಕೆರೆ ತುಂಬಿಸುವ ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆ ಮಾನ್ಯತೆ ನೀಡಿ ಕೇಂದ್ರ ಸರ್ಕಾರವು 5,300 ಕೋಟಿ ರೂಪಾಯಿಗಳನ್ನು ಒದಗಿಸಿದೆ. ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3 ರ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ. ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯಡಿ ಹಾಸನ, ಚಿಕ್ಕಮಗಳೂರು, ತುಮಕೂರು, ಬೆಂಗಳೂರು ಗ್ರಾಮಾಂತರ, ರಾಮನಗರ, ಚಿಕ್ಕಬಳ್ಳಾಪುರ, ಕೋಲಾರ ಜಿಲ್ಲೆಗಳ 527 ಕೆರೆಗಳಿಗೆ ನೀರು ತುಂಬಿಸಲಾಗುವುದು. ಕಳಸಾ ಬಂಡೂರಾ ನಾಲಾ ತಿರುವು ಯೋಜನೆಗಳ (Lift Scheme) ವಿಸ್ತೃತ ಯೋಜನಾ ವರದಿಗೆ ಕೇಂದ್ರ ಜಲ ಆಯೋಗವು ಸಮ್ಮತಿಸಿದೆ.

78) ನನ್ನ ಸರ್ಕಾರವು ಪಶ್ಚಿಮಾಭಿಮುಖವಾಗಿ ಹರಿಯುವ ನದಿಗಳಿಗೆ ಅಡ್ಡಲಾಗಿ ಕಿಂಡಿ ಅಣೆಕಟ್ಟು ನಿರ್ಮಿಸುವ ಪಶ್ಚಿಮ ವಾಹಿನಿ ಯೋಜನೆ ಅಡಿಯಲ್ಲಿ ಕಳೆದ ಮೂರುವರೆ ವರ್ಷಗಳಿಂದ

ಒಟ್ಟಾರೆಯಾಗಿ 473 ಕಾಮಗಾರಿಗಳನ್ನು 1506 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಕೈಗೆತ್ತಿಕೊಳ್ಳಲು ಅನುಮೋದನೆ ನೀಡಿರುತ್ತದೆ. ರಾಜ್ಯದ ಕರಾವಳಿ ಪ್ರದೇಶದಲ್ಲಿ ಹರಿಯುವ ನದಿಗಳಿಗೆ ಖಾರ್ ಲ್ಯಾಂಡ್ ಬಂಡ್ ನಿರ್ಮಿಸಿ ಲವಣ ಪೀಡಿತ ಪ್ರದೇಶವನ್ನು ಸಂರಕ್ಷಿಸಿ ಕೊಳ್ಳಲು 600 ಕೋಟಿ ರೂಪಾಯಿಗಳ ಕಾಮಗಾರಿಗಳಿಗೆ ಅನುಮೋದನೆ ನೀಡಿದೆ ಹಾಗೂ ಏತ ನೀರಾವರಿ ಯೋಜನೆ ಮೂಲಕ ಕೆರೆಗಳಿಗೆ ನೀರು ತುಂಬಿಸುವ ಕಾಮಗಾರಿಗಳನ್ನು 2187 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಕೈಗೊಳ್ಳಲು ಅನುಮೋದಿಸಿದೆ.

79) ನನ್ನ ಸರ್ಕಾರವು ರಾಜ್ಯದಲ್ಲಿ ಮೊಟ್ಟ ಮೊದಲನೆಯ ಬಾರಿಗೆ ಅಭಿವೃದ್ಧಿ ಚಟುವಟಿಕೆಗಳಿಂದ ಆಗಿರುವ ಹಾನಿಯನ್ನು ಸರಿದೂಗಿಸಲು ಹಸಿರು ಆಯವ್ಯಯವನ್ನು ತಯಾರಿಸಿದ್ದು, ಇದರಡಿ ಅನೇಕ ಕಾರ್ಯ ಕ್ರಮಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಮಾನವ-ವನ್ಯಜೀವಿ ಸಂಘರ್ಷ ಪ್ರಕರಣಗಳು ಹೆಚ್ಚುತ್ತಿದ್ದು, ಇದನ್ನು ತಗ್ಗಿಸಲು ಅನೇಕ ಕ್ರಮಗಳನ್ನು ಕೈಗೊಳ್ಳಲಾಗಿದೆ. ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಮಾನವ ಪ್ರಾಣಹಾನಿ, ಅಂಗವಿಕಲತೆ, ಆಸ್ತಿ ನಷ್ಟಗಳಿಗೆ ನೀಡುತ್ತಿದ್ದ ಪರಿಹಾರ ಧನವನ್ನು ಪರಿಷ್ಕರಿಸಿ ಹೆಚ್ಚಿಸಲಾಗಿದೆ. ಮಾನವ ಪ್ರಾಣಹಾನಿಗೆ ನೀಡುತ್ತಿದ್ದ ಪರಿಹಾರವನ್ನು 15 ಲಕ್ಷಕ್ಕೆ ಹೆಚ್ಚಿಸಲಾಗಿದೆ.

80) ನನ್ನ ಸರ್ಕಾರವು ಈ ಹಿಂದೆ 9,94,881.11 ಹೆಕ್ಟೇರ್ ಪರಿಭಾವಿತ ಅರಣ್ಯವೆಂದು ಗುರುತಿಸಲಾಗಿದ್ದ ಪ್ರದೇಶದಲ್ಲಿ 3,30,186.93 ಹೆಕ್ಟೇರ್ ಪ್ರದೇಶವನ್ನು ಮಾತ್ರ ಪರಿಭಾವಿತ ಅರಣ್ಯವೆಂದು ಅಧಿಸೂಚಿಸಿ ಉಳಿದ 7,73,326.91 ಹೆಕ್ಟೇರ್ ಪ್ರದೇಶದಲ್ಲಿ

ವಾಸ್ತವದಲ್ಲಿ ಲಭ್ಯವಿರುವ ಜಮೀನುಗಳನ್ನು ಪರಿಭಾವಿತ ಅರಣ್ಯ ಪಟ್ಟಿಯಿಂದ ಕೈಬಿಡಲಾಗಿದೆ.

81) ನನ್ನ ಸರ್ಕಾರವು ಕರ್ನಾಟಕ ಭೂ ಕಬಳಿಕೆ ನಿಷೇಧ ಅಧಿನಿಯಮ 2011ರ ಕಲಂ 2(ಡಿ) "ಭೂಮಿ" ಎಂಬ ಪರಿಭಾಷೆಗೆ ತಿದ್ದುಪಡಿ ತಂದು ಬಿ.ಬಿ.ಎಂ.ಪಿ. ವ್ಯಾಪ್ತಿಯ 18 ಕಿಲೋ ಮೀಟರ್, ಮಹಾ ನಗರ ಪಾಲಿಕೆ ವ್ಯಾಪ್ತಿಯ 10 ಕಿಲೋ ಮೀಟರ್, ನಗರಪಾಲಿಕೆ ವ್ಯಾಪ್ತಿಯ 5 ಕಿಲೋ ಮೀಟರ್, ಪುರಸಭೆ ವ್ಯಾಪ್ತಿಯ 3 ಕಿಲೋಮೀಟರ್‌ಗೆ ಸೀಮಿತಗೊಳಿಸಿ, ಇತರೆ ಪ್ರದೇಶಗಳನ್ನು ಹೊರತುಪಡಿಸಲಾಗಿದೆ.

82) ಅಂತಿಮವಾಗಿ, ಕರ್ನಾಟಕವು ತನ್ನ ಪ್ರಗತಿಪರ, ಪ್ರಜಾಸ್ನೇಹಿ ಯೋಜನೆಗಳ ಮುಖೇನ ಅಭಿವೃದ್ಧಿ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿ, ದೇಶದ ಮುಂಚೂಣಿ ರಾಜ್ಯಗಳಲ್ಲಿ ಒಂದಾಗಿದೆ. ರಾಜ್ಯವು ಹಲವು ರಂಗದಲ್ಲಿ ಕೈಗೊಳ್ಳುವ ಹೊಸ ಯೋಜನೆ, ಕಾರ್ಯಕ್ರಮಗಳು ಇತರೆ ರಾಜ್ಯಗಳಿಗೆ ಮಾದರಿಯಾಗಿರುತ್ತವೆ. ಆದ್ದರಿಂದ, ಗೌರವಾನ್ವಿತ ವಿಧಾನಮಂಡಲದ ಸದಸ್ಯರು ತಮ್ಮ ರಚನಾತ್ಮಕ, ಗುಣಾತ್ಮಕ ವಿಸ್ತೃತ ಚರ್ಚೆಯಲ್ಲಿ ಪಾಲ್ಗೊಳ್ಳುವ ಮುಖೇನ ರಾಜ್ಯವನ್ನು ಮತ್ತಷ್ಟು ಪ್ರಗತಿಯತ್ತ ಕೊಂಡೊಯ್ಯುತ್ತೀರೆಂದು ಆಶಿಸುತ್ತೇನೆ. ಈ ಸದನಗಳಲ್ಲಿ ನಡೆಯುವ ಚರ್ಚೆಗಳು ನಾಡಿನ ಉಜ್ವಲ ಭವಿಷ್ಯಕ್ಕೆ ದಿಕ್ಸೂಚಿಯಾಗಲಿ; ನವ ಕರ್ನಾಟಕ ನಿರ್ಮಾಣಕ್ಕೆ ಕೊಡುಗೆಯಾಗಲಿ ಎಂದು ಹಾರೈಸುತ್ತೇನೆ.

**ಜೈ ಹಿಂದ್ ! ಜೈ ಕರ್ನಾಟಕ !!**